# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 307 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 29–06–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 01 Issue - 307 | Title- Code: KARKAN 28269 | Chitradurga | Date: 29-06-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಜನಸಾಮಾನ್ಯರ ಸಂಕಷ್ಟಗಳಿಗೆ ಸ್ಪಂದಿಸಿ: ನವ ನಿರ್ಮಾಣ ಸೇನೆ ಆಗ್ರಹ 2

ಮಲೇರಿಯಾ ನಿವಾರಣೆ ಎಲ್ಲರ ಸಹಭಾಗಿತ್ವದಿಂದಷ್ಟೆ ಸಾಧ್ಯ 3

ರಾಜ್ಯದ ಸಣ್ಣಕೈಗಾರಿಕೆಗಳ ಅಭಿವೃದ್ಧಿ ಮಂಡಳಿಗೆ ಹೆಚ್ಚಿನ ಆರ್ಥಿಕ ನೆರವು ಅಗತ್ಯ 4



ಸುದ್ದಿ, ಜಾಹಿರಾತಿಗೆ 9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

## ಫಾಸ್ಟ್ ನ್ಯೂಸ್

### ಎಸ್‌ಟಿ ಸಮುದಾಯಕ್ಕೆ ಕಾಂಗ್ರೆಸ್ ಸರ್ಕಾರದಿಂದ ಮಹಾ ಮೋಸ: ಶ್ಯಾಮ್



» ದಾವಣಗೆರೆ

ಎಸ್.ಟಿ. ಸಮುದಾಯಕ್ಕೆ ಮೀಸಲಾಗಿದ್ದ ಅನುದಾನವನ್ನು ಕಾಂಗ್ರೆಸ್ ಸರ್ಕಾರ ನುಂಗಿ ಹಾಕಿದ್ದು, ದಲಿತರಿಗೆ ಮಹಾದ್ರೋಹ ಬಗೆದಿದೆ ಎಂದು ರಾಜ್ಯ ಬಿಜೆಪಿ ಯುವ ಘಟಕ ಉಪಾಧ್ಯಕ್ಷರಾದ ಜಿ.ಎಸ್ ಶ್ಯಾಮ್ ಹೇಳಿದ್ದಾರೆ. ಈ ಕಾರಣಕ್ಕೆ ಬಿಜೆಪಿ ರಾಜ್ಯಾದ್ಯಂತ ಹೋರಾಟ ಮಾಡಿದ್ದು, ನ್ಯಾಯ ಸಿಗುವವರೆಗೂ ಹೋರಾಟ ಮಾಡುತ್ತದೆ ಎಂದರು. ಬಿಜೆಪಿ ಯುವ ಘಟಕದಿಂದಲೂ ಪ್ರತಿಭಟನೆಯಲ್ಲಿ ಪಾಲ್ಗೊಂಡು ದಲಿತರಿಗೆ ಆಗಿರುವ ಅನ್ಯಾಯಕ್ಕೆ ಹೋರಾಟ ಮಾಡಿದ್ದೇವೆ. ದಲಿತರ ಮತ ಪಡೆದು ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರ್ಕಾರ, ಅವರಿಗೆ ವಂಚನೆ ಮಾಡಿದೆ ಎಂದರೆ ಇದು ಎಂತ ಕೆಟ್ಟ ಸರ್ಕಾರ ಎಂದರು.ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರದಲ್ಲಿ ಭ್ರಷ್ಟರೇ ಹೆಚ್ಚಾಗಿದ್ದಾರೆ, ಎಲ್ಲಿ ಅಧಿಕಾರ ತಪ್ಪುತ್ತದೆ ಎಂಬ ಭಯದಲ್ಲಿ ಮೋಸ ಮಾಡುತ್ತಿರುವ ಸಚಿವರು, ಅಧಿಕಾರಿಗಳ ವಿರುದ್ಧ ಸಿದ್ದರಾಮಯ್ಯ ಮಾತಾಡುತ್ತಿಲ್ಲ, ಕ್ರಮವನ್ನು ಕೈಗೊಳ್ಳುತ್ತಿಲ್ಲ ಎಂದರು. ರಾಜ್ಯ ಬಿಜೆಪಿ ಯುವ ಘಟಕ ಬಡವರು, ಶೋಷಿತರ ಪರವಾಗಿಯೇ ಇರುತ್ತದೆ ಎಂದು ಜಿ.ಎಸ್ ಶ್ಯಾಮ್ ತಿಳಿಸಿದರು.

### ಜು.2ರಂದು ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆ

» ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಚಿತ್ರದುರ್ಗ ಇವರ ಸಂಯುಕ್ತಾಶ್ರಯದಲ್ಲಿ ಡಾ.ಫ.ಗು.ಹಳಕಟ್ಟಿಯವರ ಜನ್ಮದಿನದ ಅಂಗವಾಗಿ ವಚನ ಸಾಹಿತ್ಯ ಸಂರಕ್ಷಣಾ ದಿನಾಚರಣೆಯನ್ನು ಜುಲೈ 2ರಂದು ಬೆಳಿಗ್ಗೆ 11 ಗಂಟೆಗೆ ಚಿತ್ರದುರ್ಗ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದೆ.ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ. ಕಾರಜೋಳ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ, ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ಮಂಡಳಿ ಅಧ್ಯಕ್ಷ ಬಿ.ಜಿ.ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮ ಅಧ್ಯಕ್ಷ ಟಿ.ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್. ನವೀನ್, ಡಿ.ಟಿ.ಶ್ರೀನಿವಾಸ್ ಭಾಗವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷಾರಸ ಮಂಡಳಿಯ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಎಂ.ಶಿವಸ್ವಾಮಿ ಹಾಗೂ ಜಿಲ್ಲೆಯ ಸಮಸ್ತ ಗೌರವಾನ್ವಿತ ಜನಪ್ರತಿನಿಧಿಗಳು ಮತ್ತು ಗಣ್ಯರು ಭಾಗವಹಿಸುವರು. ಹೊಳಲ್ಕೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಉಪನ್ಯಾಸಕ ಡಾ.ಸಂತೋಷ ಪವಾರ್ ಉಪನ್ಯಾಸ ನೀಡುವರು.

**ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಮುತ್ತಿಗೆ ಯತ್ನ**

# ವಾಲ್ಮೀಕಿ ಹಗರಣ: ಸಿದ್ದರಾಮಯ್ಯ ರಾಜೀನಾಮೆಗೆ ಕೇಸರಿ ಪಡೆ ಪಟ್ಟು



» ಚಿತ್ರದುರ್ಗ

ಬೇರೆ ರಾಜ್ಯಗಳ ಲೋಕಸಭೆ ಚುನಾವಣೆಗೆ ಕರ್ನಾಟಕವನ್ನು ಎಟಿಎಂ ಆಗಿ ಮಾಡಿಕೊಂಡಿದ್ದಾರೆ. ರಾಹುಲ್ ಗಾಂಧಿಗೆ ಹಣ ಕೊಡಬೇಕು. ನಿಗಮ ಹಣವನ್ನು ಬಳಕೆ ಮಾಡಿಕೊಂಡಿರುವುದು ಸಿಎಂ ಗಮನಕ್ಕೆ ಬರದೆ ಇರಲು ಸಾಧ್ಯ ಇಲ್ಲ. ಸಚಿವ ಶರಣ ಪ್ರಕಾಶ್ ಪಾಟೀಲ್, ನಿಗಮದ ಅಧ್ಯಕ್ಷ ಬಸವರಾಜ ದದ್ದಲ್ ಹೆಸರು ಇದೆ. ಸ್ವತಃ ಮುಖ್ಯಮಂತ್ರಿ ಕೂಡಾ ಇದರಲ್ಲಿ ಭಾಗಿಯಾಗಿದ್ದಾರೆ.ಎಲ್ಲರೂ ರಾಜೀನಾಮೆ ಕೊಡಬೇಕು' ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಆಗ್ರಹಿಸಿದ್ದಾರೆ.

ಚಿತ್ರದುರ್ಗ ನಗರದಲ್ಲಿ ಶುಕ್ರವಾರ ಬಿಜೆಪಿ ಹಮ್ಮಿಕೊಂಡಿದ್ದ ವಾಲ್ಮೀಕಿ ನಿಗಮದ ಹಗರಣಕ್ಕೆ ಸಂಬಂಧಪಟ್ಟಂತೆ .ವಿಜಯೇಂದ್ರನೇತೃತ್ವದಲ್ಲಿಜಿಲ್ಲಾಧಿಕಾರಿಗಳ ಕಚೇರಿ ಮುತ್ತಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಕಳೆದ ಒಂದು ವರ್ಷದಿಂದ ರಾಜ್ಯ ಸರ್ಕಾರ ನಿರಂತರ ಭ್ರಷ್ಟಾಚಾರದಲ್ಲಿ ತೊಡಗಿದೆ. ಅಭಿವೃದ್ಧಿ ನಿಂತು ಹೋಗಿದೆ. ಬಿಜೆಪಿ ಮೇಲೆ ಭ್ರಷ್ಟಾಚಾರದ ಆರೋಪ ಮಾಡಿ ಅಧಿಕಾರಕ್ಕೆ ಬಂದವರು, ಅಭಿವೃದ್ಧಿಯನ್ನೇ ಮರೆತಿದ್ದಾರೆ' ಎಂದ ಅವರು, ರಾಜ್ಯದ ರಾಜಕೀಯ ಇತಿಹಾಸದಲ್ಲಿ ಹಿಂದೆಂದೂ ಈ ರೀತಿಯ ಭ್ರಷ್ಟಾಚಾರ ನಡೆದಿಲ್ಲ. ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ ಆಂಧ್ರದ ಲೋಕಸಭಾ ಚುನಾವಣೆಗೆ ಹಣ ಬಳಕೆ ಮಾಡಲಾಗಿದೆ. ಬಾರ್‌ನಲ್ಲಿ ಕುಳಿತು ಕುಡಿದ ಬಿಲ್ ಅನ್ನು ಸಹ ವಾಲ್ಮೀಕಿ ನಿಗಮದ ಹಣದಲ್ಲಿ ಕೊಟ್ಟಿದ್ದಾರೆ' ಎಂದು ವಾಗ್ದಾಳಿ ನಡೆಸಿದರು.

'ಯಡಿಯೂರಪ್ಪ ಅವರು ವಾಲ್ಮೀಕಿ ಅಭಿವೃದ್ಧಿ ನಿಗಮ ಸ್ಥಾಪಿಸಿ ನೂರಾರು ಕೋಟಿ ಅನುದಾನ ನೀಡಿದರು. ಸಮಾಜದ ಬಡ ಮಕ್ಕಳು, ಹಿಂದುಳಿದವರ ಅಭಿವೃದ್ಧಿಗೆ ಮೀಸಲಿಟ್ಟಿದ್ದರು. ಆದರೆ, ಈ ಸರ್ಕಾರ ಹಗಲು ದರೋಡೆ ಮಾಡುತ್ತಿದೆ. ಸಚಿವರಾಗಿದ್ದ ನಾಗೇಂದ್ರ ರಾಜೀನಾಮೆ ಪಡೆಯಲಾಗಿದೆ. ಇದು ನಾಗೇಂದ್ರ ಒಬ್ಬರ ತಪ್ಪಲ್ಲ. ಮುಖ್ಯಮಂತ್ರಿ ಆರ್ಥಿಕ ಸಚಿವರ ಗಮನದಲ್ಲೇ ಪ್ರಕರಣ ನಡೆದಿದೆ' ಎಂದು ದೂರಿದ ಅವರು, ಪಕ್ಕದ ಆಂಧ್ರಪ್ರದೇಶದ ಚುನಾವಣೆಗೆ ರಾಜ್ಯದ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಹೋಗಿದೆ ಎಂದು ಆಪಾದಿಸುತ್ತಿರುವ ಬಿಜೆಪಿ, ಈ ಹಗರಣದಲ್ಲಿ ಸಚಿವ ನಾಗೇಂದ್ರ ಅವರ ರಾಜಿನಾಮೆ ಪಡೆದು ಪ್ರಕರಣ ಮುಚ್ಚಿ ಹಾಕುವ ಯತ್ನ ನಡೆದಿದೆ. ಆದರೆ, ಎಲ್ಲವೂ ಮುಖ್ಯಮಂತ್ರಿಗಳ ಕಣ್ಣೋಟದಲ್ಲೇ ನಡೆದಿದ್ದು, ಈ ಹಗರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜಿನಾಮೆ ನೀಡಬೇಕು ಎಂದು ಒತ್ತಾಯಿಸಲಾಯಿತು.







ರಾಜ್ಯದಲ್ಲಿ ಭೀಕರ ಬರಗಾಲ ಬಂದಾಗ ರೈತರಿಗೆ ಈ ಸರ್ಕಾರ ಸ್ಪಂದಿಸಿಲ್ಲ. ವಾಲ್ಮೀಕಿ ಸಮುದಾಯಕ್ಕೆ ಅನ್ಯಾಯ ಆಗಿದೆ. ಇದಕ್ಕೆ ತಕ್ಕ ಪ್ರಾಯಶ್ಚಿತ್ತ ಆಗಬೇಕು. ಲೆಕ್ಕಾಧಿಕಾರಿ ಚಂದ್ರಶೇಖರ್ ಬರೆದಿದ್ದ ಡೆತ್‌ನೋಟ್‌ನಲ್ಲಿ ಸ್ಪಷ್ಟವಾಗಿ ಉಲ್ಲೇಖ ಮಾಡಿದ್ದಾರೆ. ಲೋಕಸಭೆ ಚುನಾವಣೆಗೆ ಹಣ ಕೊಡಲು ಕಾಂಗ್ರೆಸ್ ಹೈಕಮಾಂಡ್ ಒತ್ತಡವಿತ್ತು. ಹಾಗಾಗಿ ಬೇರೆ ನಿಗಮಗಳಲ್ಲೂ ಅವ್ಯವಹಾರ ಆಗಿದೆ. ಎಸ್‌ಇಪಿ, ಟಿಎಸ್‌ಪಿ ಅನುದಾನವೂ ದುರ್ಬಳಕೆ ಆಗಿದೆ. ಲಜ್ಜೆಗೆಟ್ಟ ಕಾಂಗ್ರೆಸ್ ಸರ್ಕಾರದ ಭ್ರಷ್ಟ ಮಂತ್ರಿಗಳೆಲ್ಲರೂ ರಾಜೀನಾಮೆ ಕೊಡಬೇಕು' ಎಂದು ಒತ್ತಾಯಿಸಿದರು.

ಮಾಜಿ ಶಾಸಕ ಎಸ್.ತಿಪ್ಪೇಸ್ವಾಮಿ ಮಾತನಾಡಿ, 'ವಾಲ್ಮೀಕಿ ನಿಗಮದ 187 ಕೋಟಿ ರೂ.ಗಳನ್ನು ಆಂಧ್ರಪ್ರದೇಶದ ಚುನಾವಣೆಗೆ ಕಳಿಸಿದ್ದಾರೆ. ಅನೇಕ ಆಶ್ವಾಸನೆ ಕೊಟ್ಟು ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಪೆಟ್ರೋಲ್, ಡೀಸೆಲ್ ದರ ಹೆಚ್ಚಿಸಿದ್ದಾರೆ. ಬಿಟ್ಟಿ ಭಾಗ್ಯ ಕೊಟ್ಟು ಹೆಣ್ಣು ಮಕ್ಕಳನ್ನು ಮರುಳು ಮಾಡಿ ಈಗ ಬೆಲೆ ಹೆಚ್ಚಿಸಿದ್ದಾರೆ. ಸಂಪನ್ಮೂಲ 60 ಸಾವಿರ ಕೋಟಿ ಬೇಕು. ಅದಕ್ಕೆ ನಾಯಕರ ದುಡ್ಡೇ ಬೇಕಾ. ಬಡವರು, ಬೋರ್‌ವೆಲ್ ಹಾಕಿಸುವ ಹಣ ನುಂಗಿದರೂ ಒಬ್ಬ ಶಾಸಕರು ಪ್ರಶ್ನೆ ಮಾಡಿಲ್ಲ. ಈ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ರಾಜೀನಾಮೆ ಕೊಡಬೇಕು' ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅದ್ಯಕ್ಷರಾದ ಎ ಮುರಳಿ,ಹನುಮಂತೆಗೌಡ; ಶಾಸಕರಾದ ಎಂ ಚಂದ್ರಪ್ಪ, ಎಸ್ ಟಿ ಮೋರ್ಚಾ ರಾಜ್ಯದ್ಯಕ್ಷ ಬಂಗಾರು ಹನುಮಂತು, ವಿಧಾನ ಪರಿಷತ್ ಸದಸ್ಯ ಕೆ.ಎಸ್ ನವೀನ್, ಮಾಜಿ ಶಾಸಕರಾದ ತಿಪ್ಪಾರೆಡ್ಡಿ, ನೇರಲಗುಂಟೆ ತಿಪ್ಪೇಸ್ವಾಮಿ, ರಾಮಚಂದ್ರಪ್ಪ, ಮುಖಂಡರಾದ ಎಸ್ ಲಿಂಗಮೂರ್ತಿ, ಉಮೇಶ ಕಾರಜೋಳ; ಜಿ.ಎಸ್. ಅನಿತ್‌ಕುಮಾರ್, ಡಾ,ಸಿದ್ದಾರ್ಥ, ಪ್ರಧಾನ ಕಾರ್ಯದರ್ಶಿಗಳಾದ ಸುರೇಶ್ ಸಿದ್ದಾಪುರ್, ಜಿ.ಎಸ್ ಸಂಪತ್‌ಕುಮಾರ್,ರಾಜ್ಯ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ರಾಜೇಶ ಬುರುಡೆ ಕಟ್ಟೆ, ಮಾಧುರಿಗೀರೀಶ್, ಕೆ.ಟಿ.ಕುಮಾರಸ್ವಾಮಿ, ಲಕ್ಷ್ಮೀಕಾಂತ್, ನವೀನ್ ಚಾಲುಕ್ಯ, ಶ್ರೀಮತಿ ಸೌಭಾಗ್ಯ ಬಸವರಾಜನ್, ನರೇಂದ್ರಹೊನ್ನಾಳ್. ಜಯಪಾಲ್ ಕೆ. ಮಲ್ಲಿಕಾರ್ಜುನ್ ವೆಂಕಟೇಶ್ ಯಾದವ. ದಗ್ಗೆ ಶಿವಪ್ರಕಾಶ್. ನಾಗರಾಜ್ ಬೇಂದ್ರೆ. ನಂದಿನಾಗರಾಜ್. ರಾಮು, ಸೀತಾರಾಮ ರೆಡ್ಡಿ. ಮಂಡಲ ಅದ್ಯಕ್ಷರಾದ ಡಾ ಮಂಜುನಾಥ್. ವಿಶ್ವನಾಥ್. ಸೂರನಹಳ್ಳಿ ಶ್ರೀನಿವಾಸ್. ಶಿವಣ್ಣ, ವೀರೇಶ ಜಾಲಿಕಟ್ಟೆ. ಗೂಳಿಹಟ್ಟಿ ಜಗದೀಶ್.ಅಶೋಕ.ಸರಸ್ವತಿ.ಶೀಲಾ. ಕಾಂಚನ,ಕವನಸೇರಿದಂತೆ ಸಾವಿರಾರು ಪಧಾದಿಕಾರಿಗಳು ಕಾರ್ಯಕರ್ತರು ಹೋರಾಟದಲ್ಲಿ ಪಾಲ್ಗೊಂಡಿದ್ದರು.

**ಡಿಸಿ ಸರ್ಕಲ್‌ನಲ್ಲಿ ಪೋಲೀಸ್ ಸರ್ಪಗಾವಲು:** ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ 187 ಕೋಟಿ ರೂ. ಅವ್ಯವಹಾರದ ಹಿನ್ನಲೆಯಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿಗೆ ಮುತ್ತಿಗೆ ಹಾಕಿ ಪ್ರತಿಭಟಿಸಲು ನಿರ್ಧರಿಸಿದ ಹಿನ್ನಲೆಯಲ್ಲಿ ನಗರದ ಮುಖ್ಯ ರಸ್ತೆಗಳಲ್ಲಿ ಪೊಲೀಸ್ ಸರ್ಪಗಾವಲು ಹಾಕಲಾಗಿತ್ತು ಒನಕೆ ಓಬವ್ವ ವೃತ್ತಕ್ಕೆ ಬಂದು ಸೇರುವ ಎಲ್ಲ ರಸ್ತೆಗಳಲ್ಲಿ ಪೊಲೀಸರು ನಾಕಾಬಂದಿ ನಿರ್ಮಾಣ ಮಾಡಲಾಗಿತ್ತು.

ಪುಟ 2







## ಫಾಸ್ಟ್ ನ್ಯೂಸ್

### ವಾಲ್ಮೀಕಿ ಹಗರಣ: ಸಿದ್ದರಾಮಯ್ಯ ರಾಜೀನಾಮೆಗೆ ಕೇಸರಿ ಪಡೆ ಪಟ್ಟು

» ಮೊದಲ ಪುಟದಿಂದ

ಪ್ರತಿಭಟನೆ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಪೊಲೀಸರು ಎಲ್ಲ ಅಗತ್ಯ ಸಿದ್ಧತೆಗಳನ್ನು ಒನಕೆ ಓಬವ್ವ ವೃತ್ತದಲ್ಲಿ ಮಾಡಿಕೊಂಡಿದ್ದಾರೆ.

ಸ್ಥಳದಲ್ಲಿ ನೂರಾರು ಪೊಲೀಸರು ಬೀಡು ಬಿಟ್ಟಿದ್ದಾರೆ. ಸಾಕಷ್ಟು ಬ್ಯಾರಿಕೇಡ್ ಅಳವಡಿಸಿದ್ದು,. ಅಹಿತಕರ ಘಟನೆ ನಡೆಯದಂತೆ ತಡೆಯಲು ಸ್ಥಳದಲ್ಲೇ ಫೈಯರ್ ಇಂಜಿನ್ ಮತ್ತು ಅಂಬುಲೈನ್ಸ್ ಸಹಾ ತಯಾರಿತ್ತು. ಪ್ರತಿಭಟನಾಕಾರರನ್ನು ಬಂಧಿಸಿ ಕರೆದೊಯ್ಯಲು 4 ಸಾರಿಗೆ ಬಸ್ಸುಗಳು, ಪೊಲೀಸ್ ಟಿಟಿ ವಾಹನ, ಜೀಪ್‌ಗಳನ್ನು ತರಲಾಗಿತ್ತು. ಜಿಲ್ಲಾಧಿಕಾರಿಗಳ ಕಚೇರಿಗೆ ಹೋಗುವವರಿಗೂ ಸಹಾ ಈ ಪ್ರತಿಭಟನೆ ತೊಂದರೆಯನ್ನು ಮಾಡಿತ್ತು ಪ್ರತಿಭಟನೆ ಮುಗಿಯುವವರೆಗೂ ಸಾರ್ವಜನಿಕರನ್ನು ಕಚೇರಿಯ ಒಳಗೆ ಹೋಗಲು ಪೋಲಿಸರು ಬಿಡಲಿಲ್ಲ, ಕಚೇರಿ ಕೆಲಸಕ್ಕೆ ಹೋಗದೇ ತೊಂದರೆಯನ್ನು ಮಾಡಿದ್ದರಿಂದ ಜನತೆ ಪ್ರತಿಭಟನಾಕಾರರನ್ನು ಬೈಯುತ್ತಾ ಹೋಗುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು. ನಗರದ ಮದಕರಿ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿಯ ಕಡೆಗೆ ರಾಜ್ಯ ಸರ್ಕಾರದ ವಿರುದ್ದ ಘೋಷಣೆಗಳನ್ನು ಕೂಗುತ್ತಾ ಬಂದ ಬಿಜೆಪಿ ಕಾರ್ಯಕರ್ತರ ಪಡೆಯಲ್ಲಿ ರಾಜ್ಯಾಧ್ಯಕ್ಷರಾದ ವಿಜಯೇಂದ್ರ ರವರ ಭಾಷಣದ ನಂತರ ಜಿಲ್ಲಾಧಿಕಾರಿ ಕಚೇರಿಯನ್ನು ಮುತ್ತಿಗೆ ಹಾಕಲು ಪ್ರಯತ್ನ ನಡೆಯಿತು, ಇದರಲ್ಲಿ ಮಧುಗಿರಿ ಬಿಜೆಪಿ ಅಧ್ಯಕ್ಷ ಹನುಮಂತೇಗೌಡ ಮತ್ತು ಜಿಲ್ಲಾ ರೈತ ಮೋರ್ಚಾದ ಅಧ್ಯಕ್ಷ ವೆಂಕಟೇಶ್ ಯಾದವ್ ಪೋಲಿಸರು ಹಾಕಿದ್ದ ಬ್ಯಾರಿಕೇಟಿಂಗ್‌ನ ಮೇಲೆ ಹತ್ತಿ ಡಿಸಿ ಕಚೇರಿಯ ಒಳಗಡೆ ಹೋಗಲು ಪ್ರಯತ್ನ ನಡೆಸಿದರು ಈ ಮಧ್ಯೆ ಬಿಜೆಪಿ ಕಾರ್ಯಕರ್ತರು ಮತ್ತು ಮುಖಂಡರು ಸಹಾ ಡಿಸಿ ಕಚೇರಿಗೆ ಮುತ್ತಿಗೆ ಹಾಕಲು ಪ್ರಯತ್ನವನ್ನು ನಡೆಸಿದರು. ಈ ಸಂದರ್ಭದಲ್ಲಿ ಪೋಲಿಸರು ಬಿಗಿಯಾದ ಭದ್ರತೆಯನ್ನು ಮಾಡಿ ಕಾರ್ಯಕರ್ತರಪ್ರಯತ್ನವನ್ನುವಿಫಲಗೂಳಿಸಿದರು. ಈ ಮಧ್ಯೆ ರಾಜ್ಯಾಧ್ಯಕ್ಷರಾಧ ವಿಜಯೇಂದ್ರ ಶಾಸಕರಾದ ಎಂ.ಚಂದ್ರಪ್ಪ, ಮುಖಂಡರಾದ ಡಾ.ಸಿದ್ದಾರ್ಥ, ರಘುಚಂದನ್, ಜಯಪಾಲಯ್ಯ, ಶಿವಣ್ಣಾಚಾರ್‌ರವರು ಪೋಲಿಸ್ ಭದ್ರತೆಯನ್ನು ಮುರಿಯಲು ಯತ್ನ ಮಾಡಿದರು,

### ಡಾ. ಕೆ.ಜೈಮುನಿ ಇವರಿಗೆ ಮೇಘ ಮೈತ್ರಿ ಮಾಧ್ಯಮ ರತ್ನ ಪ್ರಶಸ್ತಿ



» ಬೆಂಗಳೂರು

ಮೇಘಮೈತ್ರಿಕನ್ನಡಸಾಹಿತ್ಯಪರಿಷತ್ ಬೆಂಗಳೂರು ಇವರ ಆಶ್ರಯದಲ್ಲಿ ನಡೆದ ಬೆಂಗಳೂರಿನ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಆಯೋಜಿಸಿದ್ದ ಮೇಘ ಮೈತ್ರಿ ಪರಿಸರ ಜಾಗೃತಿ ಸಾಹಿತ್ಯ ಸಮ್ಮೇಳನ ಕಾರ್ಯಕ್ರಮದಲ್ಲಿ ರಾಜ್ಯ ಮಟ್ಟದ ಕವಿ ಗೋಷ್ಠಿ, ಸಸಿ ನೆಡುವ ಕಾರ್ಯಕ್ರಮ, ಸಸಿ ವಿತರಣೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಪ್ರಶಸ್ತಿ ಪ್ರಧಾನವನ್ನು ಸಮಾರಂಭದಲ್ಲಿ ಪದ್ಮಶ್ರೀ ಪ್ರಶಸ್ತಿ ಸಾಲುಮರದ ತಿಮ್ಮಕ್ಕ ಇವರ ಪುತ್ರರಾದ ಡಾ.ಬಳ್ಳೂರ್ ಉಮೇಶ್ ರವರು , ಡಾಕ್ಟರೇಟ್ ಪುರಸ್ಕೃತರಾದ ಕೆ. ಜೈ ಮುನಿ ಇವರಿಗೆ ಮಾಧ್ಯಮ ಕ್ಷೇತ್ರದಲ್ಲಿ ಮೇಘ ಮೈತ್ರಿ ಮಾಧ್ಯಮ ರತ್ನ ನೀಡಿ ಸನ್ಮಾನಿಸಿ ಗೌರವಿಸಲಾಯಿತು. .ಸಂಸ್ಥೆಯ ಅಧ್ಯಕ್ಷರಾದ ರಮೇಶ್ ಕಮತ್ಗಿ ಸಮ್ಮೇಳನದ ಅಧ್ಯಕ್ಷರಾದ ಡಾ. ಪರಿಸರ ಮಂಜು, ಭೂ ವಿಜ್ಞಾನ ಪ್ರಾಧ್ಯಾಪಕರಾದ ಡಾ. ಪಿ. ಜೆ. ರೇಣುಕಾ ಪ್ರಸಾದ್, ಶಿವಣ್ಣ ಜಿ. ಸಮಾಜ ಸೇವಕರು, ಮಾಯಣ್ಣ. ವಸಂತಮ್ಮ. ಕಾವೇರಪ್ಪ. ಶ್ವೇತ. ಪ್ರಕಾಶ್. ಡಾ.ಭಾಗ್ಯ ಮುಂತಾದವರು ಉಪಸ್ಥಿತರಿದ್ದರು.

### ಜೂನ್ 29ರಂದು ಸಾಂಖ್ಯಿಕ ದಿನಾಚರಣೆ

» ಚಿತ್ರದುರ್ಗ

ಸಾಂಖ್ಯಿಕ ತಜ್ಞ ಪ್ರೊ.ಪಿ.ಸಿ.ಮಹಾಲನೋಬಿಸ್ ಅವರ ಜನ್ಮ ದಿನಾಚರಣೆಯನ್ನು "ಸಾಂಖ್ಯಿಕ ದಿನಾಚರಣೆ"ಯನ್ನಾಗಿ ಆಚರಿಸುವ ಸಲುವಾಗಿ "ಗಜ ಠಜಿ ಆಚೆಣಚಿ ಜಿಂಡಿ ಆಜಛಿಟಿ ಒಚಿಇುಟಿರ" ವಿಷಯದ ಕುರಿತು ಇದೇ ಜೂನ್ 29ರಂದು ಬೆಳಿಗ್ಗೆ 11ಕ್ಕೆ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳ ಕಚೇರಿಯಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ರವಿಕುಮಾರ್ ತಿಳಿಸಿದ್ದಾರೆ.

### ಜನಸಾಮಾನ್ಯರ ಸಂಕಷ್ಟಗಳಿಗೆ ಸ್ಪಂದಿಸಿ: ನವ ನಿರ್ಮಾಣ ಸೇನೆ ಆಗ್ರಹ

# ಅಗತ್ಯ ವಸ್ತುಗಳ ಬೆಲೆ ಇಳಿಕೆಗೆ ಒತ್ತಾಯ

» ಚಿತ್ರದುರ್ಗ

ಅಗತ್ಯ ವಸ್ತುಗಳ ಬೆಲೆ ಇಳಿಸಿ ರಾಜ್ಯದ ಜನಸಾಮಾನ್ಯರ ಸಂಕಷ್ಟಗಳಿಗೆ ಸ್ಪಂದಿಸುವಂತೆ ಕರ್ನಾಟಕ ನವ ನಿರ್ಮಾಣ ಸೇನೆ ಜಿಲ್ಲಾಧಿಕಾರಿಗಳ ಮೂಲಕ ಮುಖ್ಯಮಂತ್ರಿ ಸಿದ್ಧರಾಮಯ್ಯರವರನ್ನು ಒತ್ತಾಯಿಸಿದೆ.

ನಗರದ ಪ್ರವಾಸಿ ಮಂದಿರದಿಂದ ಜಿಲ್ಲಾಧಿಕಾರಿಗಳ ಕಚೇರಿಯವರೆಗೆ ಪ್ರತಿಭಟನೆಯನ್ನು ನಡೆಸಿದ ಕರ್ನಾಟಕ ನವನಿರ್ಮಾಣ ಸೇನೆಯ ಪದಾಧಿಕಾರಿಗಳು ದಾರಿಯುದ್ದಕ್ಕೂ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು.

ಕಳೆದ ಕೆಲವು ತಿಂಗಳುಗಳಿಂದ ರಾಜ್ಯದಲ್ಲಿ ಸ್ಪರ್ಧೆಗೆ ಬಿದ್ದತಂತೆ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುತ್ತಿವೆ. ಪೆಟ್ರೋಲ್,ಡೀಸೆಲ್ ಬೆಲೆ ಏರಿಕೆ ಮುಗಿಯುವುದರೊಳಗಾಗಿ ಹಾಲಿನ ಬೆಲೆ ಹೆಚ್ಚಳ ಮಾಡಿ ಜನ ಸಾಮಾನ್ಯರ ಬದುಕಿನ ಮೇಲೆ ಸರಕಾರ ಹೊರೆ ಹೆಚ್ಚು ಮಾಡಿದೆ. ರಾಜ್ಯದ ಬೆಂಗಳೂರು ಹೊರತು ಪಡಿಸಿ ಬಹುತೇಕ ಜಿಲ್ಲೆ,ತಾಲೂಕು, ಹೋಬಳಿ ಪ್ರದೇಶಗಳಲ್ಲಿ ಬಡತನ ರೇಖೆಗಿಂತ ಕೆಳಗಡೆ ಇರುವ ಕೂಲಿ ಕಾರ್ಮಿಕ ವರ್ಗದ ಜನರೇ





ಹೆಚ್ಚಾಗಿ ವಾಸಿಸುತ್ತಿದ್ದಾರೆ.ತಮ್ಮ ಆಡಳಿತದ ಅನುಕೂಲಕ್ಕಾಗಿ ಬೇಕಾ ಬಿಟ್ಟಿ ಬೆಲೆ ಏರಿಕೆ ಮಾಡಿ ಅವರ ದೈನಂದಿನ ಬದುಕಿನ ಜೊತೆ ಆಟವಾಡುವ ಕೆಲಸ ಸರಕಾರ ಮಾಡುತ್ತಿದೆ. ವಿದ್ಯಾರ್ಥಿ, ರೈತ ಕಾರ್ಮಿಕ ಸೇರಿದಂತೆ ಮಧ್ಯಮವರ್ಗದ ಬಡಜನರಿಗೆ ಸರಕಾರದ ಈ ನಡೆ ಆಘಾತವನ್ನುಂಟು ಮಾಡಿದೆ ಎಂದರು.

ಮುಂಬರುವ ದಿನಗಳಲ್ಲಿ ಬಸ್ ದರ ಹೆಚ್ಚಿಸುವ ಪ್ರಸ್ತಾವನೆಯನ್ನೂ ಸಾರಿಗೆ ಸಚಿವರು ಮಾಡಲಿದ್ದಾರೆ ಎನ್ನುವ ಮಾಹಿತಿ ಇದೆ.ಆರ್ಥಿಕಸಂಪನ್ಮೂಲಗಳಕ್ರೂಢಿಕರಣಕ್ಕೆ ಸರಕಾರಕ್ಕೆ ಸಾಕಷ್ಟು ದಾರಿಗಳಿವೆ.ಆದರೆ ಸರಕಾರ ಜನ ಸಾಮಾನ್ಯರ ಜೇಬಿಗೆ ಕತ್ತರಿ ಹಾಕಿ ಆ ಹಣದಿಂದಲೇ ಆಡಳಿತ ಯಂತ್ರ ನಡೆಸುತ್ತಿರುವುದು ನಿಜಕ್ಕೂ ನಾಚಿಕೆಗೇಡು.ಬೆಲೆ ಏರಿಕೆ ದುಷ್ಪರಿಣಾಮದ ಮಾಹಿತಿ ಸರಕಾರಕ್ಕೆ ಸ್ಪಷ್ಟವಾಗಿ ಇಲ್ಲ.

ಸರಕಾರ ಈ ಕೂಡಲೇ ತನ್ನ ನಿರ್ಧಾರದಿಂದ ಹಿಂದೆ ಸರಿದು ಅಗತ್ಯ ವಸ್ತುಗಳ ಬೆಲೆ ಇಳಿಸುವಂತೆ ಕರ್ನಾಟಕ ನವನಿರ್ಮಾಣ ಸೇನೆ ಒತ್ತಾಯಿಸಿದ್ದು,ಒಂದು ವೇಳೆ ಸರಕಾರ ಇದೇ ರೀತಿ ಜನ ಸಾಮಾನ್ಯರ ಬದುಕಿಗೆ ಹೊರೆಯಾಗುವಂತಹ ಆಡಳಿತ ಮಾಡಿದ್ದೇ ಆದರೆ ಮುಂಬರುವ ದಿನಗಳಲ್ಲಿ ಕರ್ನಾಟಕ ನವನಿರ್ಮಾಣ ಸೇನೆ ಸರ್ಕಾರದ ಸಚಿವರು ಭಾಗವಹಿಸುವ ಎಲ್ಲಾ ಕಾರ್ಯಕ್ರಮಗಳಲ್ಲಿ ರಾಜ್ಯಾದ್ಯಂತ ಕಪ್ಪು ಬಟ್ಟೆ ಪ್ರದರ್ಶಿಸಿ ಹೋರಾಟ ಮಾಡಬೇಕುತ್ತದೆ ಎಂದು ಎಚ್ಚರಿಸಲಾಯಿತು.ಈ ಹೋರಾಟದಲ್ಲಿ ಜಿಲ್ಲಾಧ್ಯಕ್ಷ ಎಂ.ತಿಪ್ಪೇಸ್ವಾಮಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ತ್ಯಾಗರಾಜ್, ಉಪಾಧ್ಯಕ್ಷ ಶರೀಫ್, ಶಿವಣ್ಣ, ಕಾರ್ಮಿಕ ಘಟಕದ ಅಧ್ಯಕ್ಷ ಫೈಜುಲ್ಲಾ, ಹಿರಿಯೂರು ತಾ.ಅಧ್ಯಕ್ಷ ಲಕ್ಷ್ಮೀಕಾಂತ್, ನಗರಾಧ್ಯಕ್ಷ ರಾಮು, ಯುವ ಘಟಕದ ಅಧ್ಯಕ್ಷ ಅನಿಲ್, ವಿದ್ಯಾರ್ಥಿ ಘಟಕದ ಅಧ್ಯಕ್ಷ ಮಂಜುನಾಥ್, ಪ್ರಧಾನ ಕಾರ್ಯದರ್ಶಿ ನಂದಕುಮಾರ್, ಗ್ರಾಮ ಘಟಕದ ಅಧ್ಯಕ್ಷ ಶಿವರಾಜ್, ಸದಸ್ಯರಾದ ಮಲ್ಲಿಕಾರ್ಜುನ್ ಭಾಗವಹಿಸಿದ್ದರು.

# ಕಟ್ಟಡ ಕಾರ್ಮಿಕರ ಈಡೇರಿಕೆಗಾಗಿ ಪ್ರತಿಭಟನೆ

» ದಾವಣಗೆರೆ

ಕಟ್ಟಡ ಕಾರ್ಮಿಕರ ಹಕ್ಕೋತ್ತಾಯಗಳ ಈಡೇರಿಕೆಗಾಗಿ ಒತ್ತಾಯಿಸಿ ಕರ್ನಾಟಕ ರಾಜ್ಯ ಕಟ್ಟಡ ಕಾರ್ಮಿಕರ ಸಮನ್ವಯ ಸಮಿತಿಯಿಂದ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು.

ನಗರದ ಜಯದೇವ ವೃತ್ತದಿಂದ ಉಪ ವಿಭಾಗಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿ, ಎಸಿ ಮೂಲಕ ಮುಖ್ಯಮಂತ್ರಿ, ಕಾರ್ಮಿಕ ಮಂತ್ರಿ ಹಾಗೂ ಕಾರ್ಮಿಕ ಇಲಾಖೆಯ ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿ ತಮ್ಮ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿದರು.

ಈ ವೇಳೆ ಮಾತನಾಡಿದ ಕಾರ್ಮಿಕ ಮುಖಂಡ ಆವರಗೆರೆ ಹೆಚ್.ಜಿ.ಉಮೇಶ್, ಕಾರ್ಮಿಕರಿಗೆ ಅವಶ್ಯಕತೆಯಿಲ್ಲದ ಕಿಟ್ ನೀಡುವುದನ್ನು ತಕ್ಷಣದಲ್ಲೇ ನಿಲ್ಲಿಸಬೇಕು, ಕರ್ನಾಟಕ ಹೈಕೋರ್ಟ ನೀಡಿರುವ ಕಿಟ್ಗಳ ವಿತರಣೆಯ ತಡೆಯಾಜ್ಞೆಯನ್ನು ಸರ್ಕಾರ ಚಾಚುತಪ್ಪದೇ ಪಾಲಿಸಬೇಕು. ಕಾರ್ಮಿಕರ ಆರೋಗ್ಯ ತಪಾಸಣೆಯ ಹೆಸರಲ್ಲಿ ಖಾಸಗೀ ಆಸ್ಪತ್ರೆಗಳಿಗೆ ಕೊಟ್ಟಿರುವ ಗುತ್ತಿಗೆಯನ್ನು ರದ್ದುಮಾಡಿ, ಕಟ್ಟಡ ಕಾರ್ಮಿಕರಿಗೆ ಬಿಬಿಎಂಪಿ ಮಾದರಿಯಲ್ಲಿ ಇಎಸ್.ಐ ಜಾರಿ ಮಾಡಬೇಕು ಎಂದು ಒತ್ತಾಯಿಸಿದರು.

ಈ ಮೊದಲು ಇದ್ದ ಶೈಕ್ಷಣಿಕ ಧನಸಹಾಯವನ್ನು ಮುಂದುವರೆಸಬೇಕು ಹಾಗೂ ಹೈ ಕೋರ್ಟ ಆದೇಶದಂತೆ ಬಾಕಿ ಇರುವ





ಎಲ್ಲಾ ವಿದ್ಯಾರ್ಥಿಗಳಿಗೆ ಧನಸಹಾಯವನ್ನು ಬಿಡುಗಡೆ ಮಾಡಬೇಕು. ಶೈಕ್ಷಣಿಕ ಧನಸಹಾಯ ಅರ್ಜಿಯನ್ನು ಕಲ್ಯಾಣ ಮಂಡಳಿಯ ವೆಬ್ ಸೈಟ್ ನಲ್ಲಿಯೇ ಅರ್ಜಿಹಾಕಲು ಕ್ರಮಕೈಗೊಳ್ಳಬೇಕು. ನಕಲಿ ಕಾರ್ಮಿಕರ ಹೆಸರಿನಲ್ಲಿ ನೈಜ ಕಾರ್ಮಿಕರ ಕಾರ್ಡಗಳನ್ನು ತಿರಸ್ಕರಿಸುವುದನ್ನು ನಿಲ್ಲಿಸಬೇಕು ಮತ್ತು ಬಾಕಿ ಇರುವ ಧನಸಹಾಯ ಅರ್ಜಿಗಳನ್ನು ಬೇಗನೇ ವಿಲೇವಾರಿ ಮಾಡಬೇಕೆಂದು ಮನವಿ ಮಾಡಿದರು. ಸಿಐಟಿಯು ಮುಖಂಡ ಕೆ.ಹೆಚ್. ಆನಂದರಾಜ್ ಮಾತನಾಡಿ, ಕಟ್ಟಡ ಕಾರ್ಮಿಕರ ಕಲ್ಯಾಣ ಮಂಡಳಿಯು ಏಕಪಕ್ಷೀಯ ತೀರ್ಮಾನ ಕೈಬಿಡಬೇಕು. ಕಾರ್ಮಿಕ ಸಂಘಟನೆಗಳ ಜೊತೆ ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಕಾರ್ಮಿಕರ ಸಮಸ್ಯೆಗಳ ಕುರಿತು ಚರ್ಚಿಸಿ ತ್ರಿಪಕ್ಷೀಯ ತೀರ್ಮಾನಕ್ಕೆ ಬರಬೇಕು. ಕಾರ್ಮಿಕರಿಗೆ ಹೊರೆಯಾಗಿರುವ ದಿನನಿತ್ಯದ ಬಳಕೆಯ ವಸ್ತುಗಳಾದ ಪೆಟ್ರೋಲ್, ಡಿಸೇಲ್, ಹಾಲಿನದರ, ತರಕಾರಿಗಳ ಬೆಲೆ ಸೇರಿದಂತೆ ದಿನ ನಿತ್ಯ ಬಳಕೆಯ ವಸ್ತುಗಳ ದರ ಇಳಿಕೆ ಮಾಡಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ವಿ.ಲಕ್ಷ್ಮಣ, ಶಿವಕುಮಾರ್.ಡಿ.ಶೆಟ್ಟರ್, ಹೆಚ್‌ಕೆಆರ್ ಸುರೇಶ್, ಎಸ್.ಕೆ.ಆದಿಲ್ ಖಾನ್, ಮಹಮ್ಮದ್ ರಫೀಕ್, ನಾಗಮ್ಮ, ಸತೀಶ್ ಅರವಿಂದ್, ಲಕ್ಷ್ಮಣ್, ಭರಮಪ್ಪ, ಹನುಮಂತಪ್ಪ, ತಿಪ್ಪೇಶ್ ಇತರರು ಇದ್ದರು.

### ಸಫಾಯಿ ಕರ್ಮಚಾರಿ ನಿಗಾ ಉಸ್ತುವಾರಿ ಸಮಿತಿ ಸಭೆ

# ಪೌರಕಾರ್ಮಿಕರ ಕುಂದುಕೊರತೆ ಚರ್ಚೆ



» ಚಿತ್ರದುರ್ಗ

ಚಿತ್ರದುರ್ಗ ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ 2024–25ನೇ ಸಾಲಿನ ಉಪವಿಭಾಗ ಮಟ್ಟದ ಒಂದನೇ ತ್ರೈಮಾಸಿಕ ಸಫಾಯಿ ಕರ್ಮಚಾರಿಗಳ ನಿಗಾ ಉಸ್ತುವಾರಿ ಸಮಿತಿ ಸಭೆಯನ್ನು ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಅಧ್ಯಕ್ಷತೆಯಲ್ಲಿ ನಡೆಸಲಾಯಿತು.

ಪೌರ ಕಾರ್ಮಿಕರ ಕುಂದು ಕೊರತೆಗಳು, ಸೌಲಭ್ಯಗಳು, ಸಿಬ್ಬಂದಿ ನೇಮಕಾತಿ ಹಾಗೂ ನಗರಗಳಲ್ಲಿನ ಬಡಾವಣೆಗಳಲ್ಲಿ ಸ್ವಚ್ಛತೆ ಮತ್ತು ನೈರ್ಮಲ್ಯದ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹನುಮಂತಪ್ಪ, ಸಮಾಜ ಕಲ್ಯಾಣ ಇಲಾಖೆಸಹಾಯಕನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ ವಿ.ಕೃಷ್ಣಮೂರ್ತಿ ಹಾಗೂ ಲೀಡ್ ಬ್ಯಾಂಕ್ ವ್ಯವಸ್ಥಾಪಕರು ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಉಪವಿಭಾಗ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆ: ನಗರದ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ 2024ನೇ ಸಾಲಿನ ಎರಡನೇ ತ್ರೈಮಾಸಿಕ ಉಪವಿಭಾಗ ಮಟ್ಟದ ಜಾಗೃತಿ ಮತ್ತು ಉಸ್ತುವಾರಿ ಸಮಿತಿ ಸಭೆಯು ಉಪವಿಭಾಗಾಧಿಕಾರಿ ಎಂ.ಕಾರ್ತಿಕ್ ಅಧ್ಯಕ್ಷತೆಯಲ್ಲಿ ನಡೆಯಿತು.

ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ಜನರ ಮೇಲೆ ನಡೆದಿರುವ ದೌರ್ಜನ್ಯ, ಜಾತಿ ನಿಂದನೆ, ಅತ್ಯಾಚಾರ, ಕೊಲೆ ಇನ್ನಿತರೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ವಿಭಾಗಾಧಿಕಾರಿ ಎಂ.ಕಾರ್ತಿಕ್, ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹನುಮಂತಪ್ಪ, ತಹಶೀಲ್ದಾರ್ ಡಾ.ನಾಗವೇಣಿ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಹಾಗೂ ಸದಸ್ಯ ಕಾರ್ಯದರ್ಶಿ ವಿ.ಕೃಷ್ಣಮೂರ್ತಿ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಗ್ರಾ.ಪಂ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಗೆ ಅರ್ಜಿ

» ದಾವಣಗೆರೆ

ಜಿಲ್ಲಾ ವ್ಯಾಪ್ತಿಯಲ್ಲಿ 206 ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳನ್ನು ಸ್ಥಾಪಿಸಿದ್ದು, ಗ್ರಾಮ ಪಂಚಾಯತಿ ಗ್ರಂಥಾಲಯಗಳಲ್ಲಿ ಪ್ರಸ್ತುತ ಖಾಲಿ ಇರುವ 16 ಗ್ರಾಮ ಪಂಚಾಯತಿ ಗ್ರಂಥಾಲಯ ಮತ್ತು ಮಾಹಿತಿ ಕೇಂದ್ರಗಳ ಮೇಲ್ವಿಚಾರಕರ ಹುದ್ದೆ ನೇಮಕ ಮಾಡಿಕೊಳ್ಳಲು ಜೂ.29 ರಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಖಾಲಿ ಇರುವ ಹುದ್ದೆಗಳು; ರಾಜಗೊಂಡನಹಳ್ಳಿ , ಬೇತೂರು, ಕೊಂಡಜ್ಜಿ, ಹೆಬ್ಬಾಳು , ಕಬ್ಬಳ, ಉಕ್ಕಡಗಾತ್ರಿ, ಹಳೆಬಾತಿ, ಪಾಂಡೋಮಟ್ಟಿ, ಕಂದನಕೋವಿ, ಕಕ್ಕರಗೊಳ್ಳ, ಬನ್ನಿಕೋಡು, ವಡೆಯರಹತ್ತೂರು, ಓಬನ್ನನಹಳ್ಳಿ(ನರಗನಹಳ್ಳಿ) , ದೊಡ್ಡಬ್ಬಿಹೆರೆ , ಅಣಜಿ , ಗುಡಾಳು ಇಲ್ಲಿ ಖಾಲಿ ಇರುತ್ತವೆ.

ಆಸಕ್ತ ಅಭ್ಯರ್ಥಿಗಳು ದಾಖಲೆಗಳನ್ನು ಪತ್ರಾಂಕಿತ ಅಧಿಕಾರಿಗಳಿಂದ ದೃಢೀಕರಿಸಿ ವೆಬ್‌ಸೈಟ್ ಜಚಿತಚಿಟಿಚಿರಜಡಿಜ.ಟುಛಿ.ಎಟಿ ಮೂಲಕ ಅರ್ಜಿ ಸಲ್ಲಿಸಿ ನಂತರ ಸ್ವೀಕೃತಿ ಪತ್ರದ ಪ್ರತಿಯೊಂದಿಗೆ ದಾಖಲೆಗಳನ್ನು ಲಗತ್ತಿಸಿ ಜಿಲ್ಲಾ ಪಂಚಾಯತ್ ಕಚೇರಿ ಆಡಳಿತ ವಿಭಾಗದ ಕೊಠಡಿ ಸಂ.25 ಗೆ ಜುಲೈ 20 ರೊಳಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಖ್ಯೆ 08192–226655 ಗೆ ಕರೆ ಮಾಡುವುದು ಜಿಲ್ಲಾ ಪಂಚಯಾತ್ ಉಪಕಾರ್ಯದರ್ಶಿ ತಿಳಿಸಿದ್ದಾರೆ.

## ಪ್ರಮುಖ ಸುದ್ದಿ

### ಅನ್ನದಾತನ ಪರಿಶ್ರಮದ ಬಗ್ಗೆ ಗೌರವವಿಲ್ಲದ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು

# ರಾಜ್ಯದ ರೈತ ಹಿತ ಕಾಪಾಡುವಲ್ಲಿ ವಿಫಲತೆ: ವೀರಣ್ಣ

» ಚಳ್ಳಕೆರೆ

ಪ್ರಸ್ತುತ ಕೇಂದ್ರ ಹಾಗೂ ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಬಿಜೆಪಿ ಹಾಗೂ ಕಾಂಗ್ರೆಸ್ ಸರ್ಕಾರಗಳು ರಾಜ್ಯದ ರೈತರ ಹಿತವನ್ನು ಸಂಪೂರ್ಣ ಕಡೆಗಣಿಸಿವೆ. ಅನ್ನಕೊಡುವ ಅನ್ನದಾತರನ್ನು ಅನುಮಾನದಿಂದ ನೋಡುವ ಪ್ರವೃತ್ತಿ ಎದ್ದುಕಾಣುತ್ತಿದೆ. ಪ್ರತಿಯೊಂದು ಹಂತದಲ್ಲೂ ರೈತರ ಬೇಡಿಕೆಗಳನ್ನು ಹತ್ತಿಕ್ಕುವ ಪ್ರಯತ್ನ ನಡೆಯುತ್ತಿದೆ. ಭದ್ರಾಮೇಲ್ದಂಡೆ ಯೋಜನೆ ಕಾಮಗಾರಿ ಜಾರಿಗೊಳಿಸುವ ಬಗ್ಗೆ ಎರಡೂ ಸರ್ಕಾರಗಳು ಮೊಸಳೆ ಕಣ್ಣೀರು ಸುರಿಸುತ್ತಿವೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರುಸೇನೆ(ಪ್ರೊ.ಬಣ) ಉಪಾಧ್ಯಕ್ಷ ರೆಡ್ಡಿಹಳ್ಳಿವೀರಣ್ಣ ಆರೋಪಿಸಿದರು.

ಅವರು, ನಗರದ ನೆಹರೂ ವೃತ್ತದಲ್ಲಿ ಮಾನವಸರಪಳಿ ನಿರ್ಮಿಸಿ ಎರಡೂ ಸರ್ಕಾರಗಳ ವಿರುದ್ದ ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದರು. ಕಳೆದ ಸುಮಾರು 5ದಶಕಗಳಿಂದ ಬರಡುಸೀಮೆಯ ಬಯಲು ನಾಡಿಗೆ ಭದ್ರಾ ಮೇಲ್ದಂಡೆ ಯೋಜನೆ ಜಾರಿಗೆ ತರಬೇಕೆಂದು ರೈತ ಸಂಘ ಒತ್ತಾಯ ಮಾಡುತ್ತಾ ಬಂದಿದೆ.





ಆದರೆ, ಭದ್ರಾ ಮೇಲ್ದಂಡೆ ಯೋಜನೆ ಜಾರಿಗೆ ತಂದರೂ ಅದಕ್ಕೆ ಸಮರ್ಪಕವಾಗಿ ಹಣ ನೀಡದೆ ಮೀನಾಮೇಷ ಎಣಿಸುತ್ತಿವೆ. ಕೇಂದ್ರ ಸರ್ಕಾರ ಈ ಕೂಡಲೇ 5300 ಕೋಟಿ ಹಣ ಬಿಡುಗಡೆ ಮಾಡಬೇಕು.

ಪ್ರಸ್ತುತ ರಾಜ್ಯ ಸರ್ಕಾರ ರೈತರಿಗೆ ಪ್ರಾಮಾಣಿಕವಾಗಿ ನೀಡಬೇಕಾದ ಬೆಳೆವಿಮೆ, ಪರಿಹಾರವನ್ನು ವಿತರಣೆ ಮಾಡುತ್ತಿಲ್ಲ, ತಾಲ್ಲೂಕಿನಾದ್ಯಂತ ಸಾವಿರಾರು ರೈತರಿಗೆ ಸರ್ಕಾರ ಇಲಾಖೆ ಅಧಿಕಾರಿಗಳು ಮಾಡಿದ ಲೋಪದಿಂದ ರೈತರ ಖಾತೆಗೆ ಹಣ ಜಮಾವಾಗಿಲ್ಲ, ವಿಶೇಷವಾಗಿ ರೈತರ ಬಿತ್ತನೆ ಬೀಜ, ಗೊಬ್ಬರ, ಕ್ರಿಮಿನಾಶ, ವಿದ್ಯುತ್ ದರ ಏರಿಸುವ ಮೂಲಕ ರಾಜ್ಯ ಸರ್ಕಾರ ಬಡ ರೈತರ ಮೇಲೆ ದಾಳಿ ನಡೆಸುತ್ತಿದೆ. ಆದ್ದರಿಂದ ರೈತರು ಸಂಘಟಿತರಾಗಿ ಸರ್ಕಾರ ವಿರುದ್ದ ಬೀದಿಗಿಳಿದು ಹೋರಾಟ ಮಾಡುದರೆ ಸರ್ಕಾರ ನಮ್ಮ ಸಮಸ್ಯೆಗೆ ಪರಿಹಾರ ಕಂಡುಕೊಳ್ಳುವ ಪ್ರಾಮಾಣಿಕ ಪ್ರಯತ್ನ ಮಾಡುತ್ತದೆ ಎಂದರು.

ಜಿಲ್ಲಾ ಕಿಸಾನ್ ಸೇಲ್ ಅಧ್ಯಕ್ಷ ದೊಡ್ಡ ಉಳ್ಳಾರ್ತಿ ಕರಿಯಣ್ಣ ಮಾತನಾಡಿ, ರಾಷ್ಟ್ರ ಹಾಗೂ ರಾಜ್ಯದಲ್ಲಿ ವಿಭಿನ್ನ ಪಕ್ಷದ ಸರ್ಕಾರಗಳಿದ್ದರೂ ರೈತರ ಬಗ್ಗೆ ಯಾವುದೇ ಕಾಳಜಿ ಇಲ್ಲ, ಕೇಂದ್ರ ಸರ್ಕಾರವೂ ಸಹ ರೈತರಿಗೆ ಹೊಸ ಯೋಜನೆ ರೂಪಿಸುತ್ತಿಲ್ಲ, ರಾಜ್ಯ ಸರ್ಕಾರ ರೈತರಿಗೆ ಕೊಡುವ ಹಣವನ್ನೇ ನೀಡುತ್ತಿಲ್ಲವೆಂದು ಅಸಮದಾನ ವ್ಯಕ್ತಪಡಿಸಿದರು. ಕರ್ನಾಟಕ ರಾಷ್ಟ್ರೀಯ ಪಕ್ಷದ ಮುಖಂಡ ನಗರಂಗೆರೆಮಹೇಶ್, ಬೋಜರಾಜ ಮುಂತಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಮನವಿ ಸ್ವೀಕರಿಸಿದ ತಹಶೀಲ್ದಾರ್ ರೇಹಾನ್‌ಪಾಷ ತಮ್ಮ ಬೇಡಿಕೆಗಳ ಬಗ್ಗೆ ಪರಿಶೀಲನೆ ನಡೆಸಲು ಜಿಲ್ಲಾಧಿಕಾರಿಗಳ ಮೂಲಕ ಕೇಂದ್ರ ಹಾಗೂ ರಾಜ್ಯ ಸರ್ಕಾರಕ್ಕೆ ಕಳಿಸುವ ಭರವಸೆ ನೀಡಿದರು. ರೈತ ಸಂಘದ ತಾಲ್ಲೂಕು ಅಧ್ಯಕ್ಷ ಕೆ.ಸಿ.ಶ್ರೀಕಂಠಮೂರ್ತಿ ಮಾತನಾಡಿ, ಭದ್ರಾ ಮೇಲ್ದಂಡೆ ಯೋಜನೆ ಜಾರಿಗೊಳಿಸಿ ಎಲ್ಲಾ ಕೆರೆಗಳಿಗೆ ನೀರು ತುಂಬಿಸಬೇಕು. ಭದ್ರಾಮೇಲ್ದಂಡೆ ಯೋಜನೆ ರಾಷ್ಟ್ರೀಯ ಯೋಜನೆಯಾಗಿ ಪರಿವರ್ತನೆಯಾಗಬೇಕು, ರೈತರು ಬೆಳೆದ ಬೆಳೆಗಳಿಗೆ ಸೂಕ್ತ ಮಾರುಕಟ್ಟೆ ವ್ಯವಸ್ಥೆ ಮಾಡಬೇಕು, ಮುಂತಾದ ಒಟ್ಟು 9 ಬೇಡಿಕೆಗಳ ಬಗ್ಗೆ ಮನವಿ ಅರ್ಪಿಸಿರುವುದಾಗಿ ತಿಳಿಸಿದರು.

ಪ್ರತಿಭಟನೆಯಲ್ಲಿ ಪ್ರಧಾನ ಕಾರ್ಯದರ್ಶಿ ಆರ್.ಬಸವರಾಜು, ತಿಪ್ಪೇಸ್ವಾಮಿಗೌಡ, ರಾಜಣ್ಣ, ಎಚ್.ಚಂದ್ರಣ್ಣ, ಜಯಣ್ಣ, ಯರ್ರಿಸ್ವಾಮಿ, ಬುಡ್ನಹಟ್ಟಿ ತಿಪ್ಪೇಸ್ವಾಮಿ, ಪಿ.ನಾಗರಾಜು, ಆರ್.ಗುರುಮೂರ್ತಿ, ಈರಣ್ಣ, ರತ್ನಮ್ಮ, ಶಿವಮ್ಮ, ನಿರ್ಮಲ, ಓಬಮ್ಮ, ಪಾಪಮ್ಮ ಮುಂತಾದವರು ಭಾಗವಹಿಸಿದ್ದರು.

# ಫಾಸ್ಟ್ ನ್ಯೂಸ್

## ವಿವಿಧ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ




» **ಚಿತ್ರದುರ್ಗ**

ಹೊಳಲ್ಕೆರೆ ಪುರಸಭಾ ವ್ಯಾಪ್ತಿಯಲ್ಲಿ ವಾಸ ಮಾಡುತ್ತಿರುವ ಇತರೆ ಬಡ ಜನಾಂಗದವರಿಗೆ ಮತ್ತು ವಿಶೇಷಚೇತನರಿಗೆ 2023–24ನೇ ಸಾಲಿನ ಎಸ್.ಎಫ್.ಸಿ ಮುಕ್ತನಿಧಿ ಅನುದಾನ ಯೋಜನೆಯಡಿ ಶೇ.7.25 ಮತ್ತು ಶೇ.5 ಯೋಜನೆಯಡಿ ವಿವಿಧ ಸೌಲಭ್ಯಗಳನ್ನು ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಮತ್ತು ನಿಗದಿತ ಅರ್ಜಿ ನಮೂನೆಗಳನ್ನು ಹೊಳಲ್ಕೆರೆ ಪುರಸಭಾ ಕಚೇರಿಯಲ್ಲಿ ಕಚೇರಿ ವೇಳೆಯಲ್ಲಿ ಪಡೆಯಬಹುದು ಹಾಗೂ ಹೊಳಲ್ಕೆರೆ ಪುರಸಭೆಯ ಅಧಿಕೃತ ಜಾಲತಾಣ http://www.holalkeretown.mrc.gov.in ನ ನೋಟಿಫಿಕೇಷನ್ ವಿಭಾಗದಲ್ಲಿ ಡೌನ್ಲೋಡ್ ಮಾಡಿಕೊಳ್ಳಬಹುದು ಎಂದು ಹೊಳಲ್ಕೆರೆ ಪುರಸಭೆಯ ಮುಖ್ಯಾಧಿಕಾರಿ ತಿಳಿಸಿದ್ದಾರೆ.

## ತೋಟಗಾರಿಕೆ ಇಲಾಖೆಯಡಿ: ಸಹಾಯಧನಕ್ಕೆ ಅರ್ಜಿ

» **ಚಿತ್ರದುರ್ಗ**

2024–25ನೇ ಸಾಲಿನ ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ಘಟಕಗಳಿಗೆ ಸಹಾಯಧನ ಪಡೆಯಲು ಆಸಕ್ತ ರೈತ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ದಾಳಿಂಬೆ, ಅಂಗಾಂಶ ಬಾಳೆ, ಡ್ರ್ಯಾಗನ್ ಫ್ರೂಟ್ ಹಣ್ಣಿನ ಬೆಳೆಗಳು, ಹೈಬ್ರಿಡ್ ತರಕಾರಿ, ಸುಗಂಧರಾಜ ಹೂಗಳು, ಬಿಡಿ ಹೂವುಗಳ ಪ್ರದೇಶ ವಿಸ್ತರಣೆ ಕಾರ್ಯಕ್ರಮಕ್ಕೆ ಮತ್ತು ಸಮುದಾಯ ನೀರು ಸಂಗ್ರಹಣಾ ಘಟಕ, ವೈಯಕ್ತಿಕ ನೀರು ಸಂಗ್ರಹಣಾ ಘಟಕ, ಪ್ಲಾಸ್ಟಿಕ್ ಮಲ್ಚಿಂಗ್, ನೆರಳುಪರದೆ, ಪಾಲಿಹೌಸ್, 20ಹೆಚ್.ಪಿ ವರೆಗಿನ ಟ್ರ್ಯಾಕ್ಟರ್, ಪ್ಯಾಕ್‌ಹೌಸ್ ಹಾಗೂ ಈರುಳ್ಳಿ ಶೇಖರಣ ಘಟಕಗಳಿಗೆ ಸಹಾಯಧನ ಪಡೆಯಲು ಆಸಕ್ತ ರೈತ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಗಳನ್ನು ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿಗೆ ಸಲ್ಲಿಸಲು ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಅಥವಾ ಹೋಬಳಿಯ ಸಹಾಯಕ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ತೋಟಗಾರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

## ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

» **ಚಿತ್ರದುರ್ಗ**

2024–25ನೇ ಶೈಕ್ಷಣಿಕ ಸಾಲಿಗೆ ಚಿತ್ರದುರ್ಗ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ ಡಾ. ಬಿ.ಆರ್.ಅಂಬೇಡ್ಕರ್ ಸರ್ಕಾರಿ ಮೆಟ್ರಿಕ್ ಪೂರ್ವ ಹಾಗೂ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶಾತಿ ಬಯಸುವ ಅರ್ಹ ವಿದ್ಯಾರ್ಥಿಗಳಿಂದ ಮ್ಯಾನುಯಲ್ ಮತ್ತು ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.ಜುಲೈ15ರವರೆಗೆಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಸಂಬಂಧಪಟ್ಟ ಮೆಟ್ರಿಕ್ ಪೂರ್ವ ಮತ್ತು ನಂತರದ ಬಾಲಕ, ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಅರ್ಜಿ ಸಲ್ಲಿಸಲು ಇಲಾಖೆಯ ವೆಬ್‌ಸೈಟ್ ತಿತಿತಿ.ತಿ.ಇಚಿಡಿ.ಟಿಛಿ.ಟಿ ನಲ್ಲಿ ಅರ್ಜಿ ಸಲ್ಲಿಸಬಹುದು. ಮ್ಯಾನುಯಲ್ ಅರ್ಜಿಯನ್ನು ಆಯಾ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿಗೆ ಅಥವಾ ಹತ್ತಿರದ ವಿದ್ಯಾರ್ಥಿನಿಲಯದ ವಾರ್ಡನ್ ಅವರಿಗೆ ಸಲ್ಲಿಸಲು ಸೂಚಿಸಿದೆ. ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ ದಾಖಲಾಗಲು ಬೇಕಾಗುವ ದಾಖಲೆಗಳು: ವಿದ್ಯಾರ್ಥಿಯ ಸ್ಯಾಟ್ಸ್ (ಖಂಖಿ) ನಂಬರ್, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಬುಕ್, ಆಧಾರ್ ಕಾರ್ಡ್, ಹಿಂದಿನ ತರಗತಿಯಲ್ಲಿ ಪಾಸಾದ ಅಂಕಪಟ್ಟಿ ಈ ಎಲ್ಲಾ ದಾಖಲೆಗಳ ಜೆರಾಕ್ಸ್ ಪ್ರತಿಗಳೊಂದಿಗೆ ವಿದ್ಯಾರ್ಥಿಯ ಬ್ಯಾಂಕ್ ಖಾತೆಗೆ ಎನ್‌ಪಿಸಿಐ ನಲ್ಲಿ ಆಧಾರ್ ಜೋಡಣೆ ಮಾಡಿರಬೇಕು ಮತ್ತು ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಮೀರಿರಬಾರದು. ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಿಗೆ ದಾಖಲಾಗಲು ಬೇಕಾಗುವ ದಾಖಲೆಗಳು: ವಿದ್ಯಾರ್ಥಿಯ ಕಾಲೇಜು ದಾಖಲಾತಿ ಪ್ರತಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಬ್ಯಾಂಕ್ ಪಾಸ್ ಬುಕ್, ಆಧಾರ್ ಕಾರ್ಡ್, ದೂರದ ಪ್ರಯಾಣ ಪತ್ರ (ಕಿಲೋಮೀಟರ್ ಸರ್ಟಿಫಿಕೇಟ್), ಈ ಎಲ್ಲಾ ದಾಖಲೆಗಳ ಜೆರಾಕ್ಸ್ ಪ್ರತಿಗಳು, ಎಸ್‌ಎಸ್‌ಪಿ ವಿವರಗಳು ಹಾಗೂ ಇತರೆ ದಾಖಲೆಗಳು ಮತ್ತು ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಮೀರಿರಬಾರದು.ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಚೇರಿ ಅಥವಾ ಹತ್ತಿರದ ವಿದ್ಯಾರ್ಥಿನಿಲಯದ ವಾರ್ಡನ್ ಅವರನ್ನು ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ ಹೆಬ್ಬಳ್ಳಿ ತಿಳಿಸಿದ್ದಾರೆ.

# ಮಲೇರಿಯಾ ನಿವಾರಣೆ ಎಲ್ಲರ ಸಹಭಾಗಿತ್ವದಿಂದಷ್ಟೆ ಸಾಧ್ಯ: ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್

» **ಚಿತ್ರದುರ್ಗ**

"ಸೊಳ್ಳೆ ಚಿಕ್ಕದಾದರೂ ಕಾಟ ದೊಡ್ಡದು" ಸೋಂಕಿತ ಹೆಣ್ಣು ಅನಾಫಿಲಿಸ್ ಸೊಳ್ಳೆ ರಾತ್ರಿವೇಳೆ ಮನುಷ್ಯರನ್ನು ಕಚ್ಚುವುದರಿಂದ ಮಲೇರಿಯಾ ರೋಗ ಒಬ್ಬರಿಂದ ಒಬ್ಬರಿಗೆ ಹರಡುತ್ತದೆ. "ಮಲೇರಿಯಾ ನಿವಾರಣೆ ಮಾಡಬೇಕಾದರೆ ಎಲ್ಲರ ಸಹಭಾಗಿತ್ವದಿಂದಷ್ಟೇ ಸಾಧ್ಯ" ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಹೇಳಿದರು.

ರಾಷ್ಟ್ರೀಯ ಆರೋಗ್ಯ ಅಭಿಯಾನ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಸಿರಿಗೆರೆ ಗ್ರಾಮ ಪಂಚಾಯಿತಿ ಕಾರ್ಯಾಲಯ ಇವರ ಸಹಯೋಗದೊಂದಿಗೆ ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ ಗ್ರಾಮ ಪಂಚಾಯಿತಿ ಆವರಣದಲ್ಲಿ ಪಂಚಾಯಿತಿ ಸದಸ್ಯರುಗಳಿಗೆ ಮಲೇರಿಯಾ ಕುರಿತು ಸಮರ್ಥನಾ ಸಭೆಯಲ್ಲಿ ಅವರು ಮಾತನಾಡಿದರು.

ಮಳೆಗಾಲ ಆರಂಭವಾದ್ದರಿಂದ ಕೆರೆಕಟ್ಟೆ ಬಾವಿಗಳಲ್ಲಿ, ಜಾನುವಾರು ಹೆಜ್ಜೆಗಳಲ್ಲಿ, ನಿಂತ ನೀರಲ್ಲಿ ಸೊಳ್ಳೆ ಉತ್ಪತ್ತಿಯಾಗುತ್ತಿದ್ದು, ಸೊಳ್ಳೆಗಳ ನಿವಾರಣೆಗೆ ಸರ್ವರು ಶ್ರಮಿಸಬೇಕಾಗಿದೆ. "ಹೆಚ್ಚು ಸಮಾನತೆಯ ಜಗತ್ತಿಗೆ ಮಲೇರಿಯ ವಿರುದ್ಧದ ಹೋರಾಟವನ್ನು ತೀವ್ರ ಗೊಳಿಸೋಣ" 2024ರ ಘೋಷಣೆಯಾಗಿದ್ದು,



ಮಲೇರಿಯಾ ವಿರುದ್ಧ ಹೋರಾಟ ಮಾಡಿ ಮಲೇರಿಯವನ್ನು 2025ಕ್ಕೆ ನಿವಾರಣೆ ಮಾಡೋಣ ಎಂದರು.

ತಾಲೂಕ ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ ಮಾತನಾಡಿ, ಚಳಿ ಜ್ವರ, ತಲೆನೋವು, ಹಲವರಿಗೆ ಹೊಟ್ಟೆ ನೋವು, ಇವು ಮಲೇರಿಯಾ ರೋಗದ ಲಕ್ಷಣಗಳಾಗಿದ್ದು, ಯಾವುದೇ ಜ್ವರ ಬರಲಿ ಆಶಾ ಕಾರ್ಯಕರ್ತೆಯರಲ್ಲಿ ಅಥವಾ ಆರೋಗ್ಯ ಸಂಸ್ಥೆಗಳಲ್ಲಿ ರಕ್ತಪರೀಕ್ಷೆ ಮಾಡುವುದರ ಮುಖಾಂತರ ಮಲೇರಿಯಾ ರೋಗವನ್ನು ಪತ್ತೆಹಚ್ಚಬಹುದು. ಸರ್ಕಾರಿ ಆಸ್ಪತ್ರೆಗಳಲ್ಲಿ ಉಚಿತವಾಗಿ ನಿಗದಿತ ಚಿಕಿತ್ಸೆ ಲಭ್ಯವಿರುವುದರಿಂದ ಯಾರು ಆತಂಕ ಪಡಬೇಕಾಗಿಲ್ಲ. ಶೀಘ್ರ ಪತ್ತೆ ತ್ವರಿತ ಚಿಕಿತ್ಸೆಯಿಂದ ಮಲೇರಿಯಾ ರೋಗವನ್ನು ನಿಯಂತ್ರಣದಲ್ಲಿಡಬಹುದು ಎಂದರು.

ವೈದ್ಯಾಧಿಕಾರಿ ಡಾ.ಜಿ.ಆರ್.ತಿಮ್ಮೇಗೌಡ ಮಾತನಾಡಿ, ಪರಿಸರ ಸ್ವಚ್ಛತೆ, ಚರಂಡಿಗಳಲ್ಲಿ ನೀರು ನಿಲ್ಲದಂತೆ ನಿಗಾ ವಹಿಸುವುದು, ಘನ ತ್ಯಾಜ್ಯ ಮತ್ತು ನಿರುಪಯುಕ್ತ ವಸ್ತುಗಳ ವಿಲೇವಾರಿ ಮಾಡುತ್ತಾ, ಉತ್ತಮ ಆರೋಗ್ಯ ಅಭ್ಯಾಸಗಳಿಂದ ಸಾಂಕ್ರಾಮಿಕ ರೋಗಗಳನ್ನು ನಿಯಂತ್ರಿಸಬಹುದು ಎಂದರು.ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ.ಮೂಗಪ್ಪ ಮಾತನಾಡಿ, "ನಿಂತ ನೀರು ಸೊಳ್ಳೆಗಳ ತವರು", ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ನಿಗಾವಹಿಸುವುದು ಮನೆಯ ಕಿಟಕಿಗಳಿಗೆ ಜಾಲರಿ ಅಳವಡಿಸುವುದು, ಮನೆಯ ಮುಂದೆ ಚೆಂಡು ಹೂವು, ಸೇವಂತಿಗೆ, ತುಳಸಿ ಬೆಳೆಸುವುದರ ಮುಖಾಂತರ ಸೊಳ್ಳೆಗಳನ್ನು ನಿಯಂತ್ರಿಸಬಹುದು. ಹಾಗೂ ಶಾಲೆಗೆ ಹೋಗುವ ಮಕ್ಕಳು ಕೈಕಾಲುಗಳಿಗೆ ಕೊಬ್ಬರಿ ಎಣ್ಣೆ ಲೇಪನ ಮಾಡಿಕೊಳ್ಳುವುದರ ಜೊತೆಗೆ ತುಂಬು ತೋಳಿನ ಬಟ್ಟೆಗಳನ್ನು ಧರಿಸಬೇಕು. ವಯಸ್ಸಾದವರು ಮಕ್ಕಳು ಹಗಲು ವೇಳೆ ಮಲಗಿದರೂ ಕೂಡ ಸೊಳ್ಳೆ ಪರದೆ ಬಳಕೆ ಮಾಡುತ್ತಾ ಸೊಳ್ಳೆ ಕಚ್ಚಿಸಿಕೊಳ್ಳದಂತೆ ಎಚ್ಚರ ವಹಿಸಿದರೆ ಕೀಟ ಜನ್ಯ ರೋಗಗಳಿಂದ ದೂರ ಇರಬಹುದು ಎಂದರು. ಸಿರಿಗೆರೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಹಾಲಮ್ಮ ಮಾತನಾಡಿ, ಆರೋಗ್ಯ ಇಲಾಖೆಯ ಮಾರ್ಗದರ್ಶನದಂತೆ ಗ್ರಾಮಗಳಲ್ಲಿ ಕೀಟಜನ್ಯ ರೋಗಗಳ ಕುರಿತು ಜಿಂಗಲ್ಸ್ ಮುಖಾಂತರ ಕಸದ ಗಾಡಿಗಳಲ್ಲಿ ಸಾರ್ವಜನಿಕರಿಗೆ ಪ್ರಚಾರ ಮಾಡುತ್ತಾ ಜಾಗೃತಿ ಮೂಡಿಸುತ್ತೇವೆ. ಜೊತೆಗೆ ಸಿರಿಗೆರೆ ಸಮುದಾಯ ಆರೋಗ್ಯ ಕೇಂದ್ರಕ್ಕೆ ಮಕ್ಕಳ ತಜ್ಞರಾದ ಡಾ.ತಿಮ್ಮೇಗೌಡ ಅವರು ಲಭ್ಯವಿರುವುದು ನಮಗೆ ಸಂತಸ ತಂದಿದೆ. ತಜ್ಞವೈದ್ಯರಿಗಾಗಿ ಜಿಲ್ಲಾ ಮಟ್ಟಕ್ಕೆ ಹೋಗುವ ಅವಶ್ಯಕತೆ ಇಲ್ಲ ಎಂದು ವೈದ್ಯರ ಸೇವೆ ಪ್ರಶಂಸಿಸಿದರು.

ಸಿರಿಗೆರೆ ಗ್ರಾಮದ ಸಂತೆ ಮೈದಾನ ಸೇರಿದಂತೆ ವಿವಿಧಡೆ "ಸೊಳ್ಳೆ ಚಿಕ್ಕದು ಕಾಟ ದೊಡ್ಡದು" "ಯಾವುದೇ ಜ್ವರವಿರಲಿ ರಕ್ತ ಪರೀಕ್ಷೆ ಮಾಡಿಸಿ" "ತುಳಸಿ ಬೆಳಸಿ, ಸೊಳ್ಳೆಯ ನಿಯಂತ್ರಿಸಿ" "ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ಎಚ್ಚರವಹಿಸಿ" "ನಿಂತ ನೀರು ಸೊಳ್ಳೆಗಳ ತವರು" ಎಂಬ ಘೋಷಣೆಗಳನ್ನು ಶಾಲಾ ವಿದ್ಯಾರ್ಥಿಗಳಿಂದ ಕೂಗಿಸುತ್ತಾ ಜಾಥಾ ಮುಖಾಂತರ ಸಾರ್ವಜನಿಕರಿಗೆ ಕೀಟ ಜನ್ಯ ರೋಗಗಳ ನಿಯಂತ್ರಣ ಕುರಿತು ಜಾಗೃತಿ ಮೂಡಿಸಲಾಯಿತು.

ಈ ಸಂದರ್ಭದಲ್ಲಿ ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಹಸ್ನಿರಾಬಾನು, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷರಾದ ದೇವರಾಜ್, ಸದಸ್ಯರಾದ ಮೋಹನ್ ಸಿದ್ದೇಶ್, ನಾಗರಾಜ್ ವಿ. ಸಿಹೆಚ್‌ಒ ರಮ್ಯಾ, ಶಾಲಾ ಮುಖ್ಯೋಪಾಧ್ಯಾಯರಾದ ದ್ರಾಕ್ಷಾಯಣಮ್ಮ, ಸಹ ಶಿಕ್ಷಕ ಮಧು, ಶಾಲಾ ವಿದ್ಯಾರ್ಥಿಗಳು ಮತ್ತಿತರರು ಹಾಜರಿದ್ದರು.

# ಪಿಸಿ–ಪಿಎನ್‌ಡಿಟಿ ಕಾಯ್ದೆ ಕುರಿತು ತರಬೇತಿ ಹಾಗೂ ಜಾಗೃತಿ ಅಭಿಯಾನ

» **ಚಿತ್ರದುರ್ಗ**

ಚಿತ್ರದುರ್ಗ ನಗರದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಮಿಷನ್ ಶಕ್ತಿ ಯೋಜನೆಯಡಿ ಜಿಲ್ಲೆಯ ಎಲ್ಲಾ ವೈದ್ಯಾಧಿಕಾರಿಗಳಿಗೆ ಪಿಸಿ–ಪಿಎನ್‌ಡಿಟಿ ಕುರಿತು ತರಬೇತಿ ಹಾಗೂ ಜಾಗೃತಿ ಅಭಿಯಾನ ನಡೆಯಿತು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಮಹಿಳಾ ಸಬಲೀಕರಣ ಘಟಕ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಂಯುಕ್ತಾಶ್ರಯದಲ್ಲಿ ಮಿಷನ್ ಶಕ್ತಿ ಯೋಜನೆಯಡಿ ಮಹಿಳೆಯರ ಮತ್ತು ಮಕ್ಕಳ ಸುರಕ್ಷತೆಗಾಗಿ ಹಾಗೂ ಸಬಲೀಕರಣಕ್ಕಾಗಿ ಸರ್ಕಾರದ ಯೋಜನೆಗಳ ಕುರಿತು 100 ದಿನಗಳ ವಿಶೇಷ ಜಾಗೃತಿ ಅಭಿಯಾನದ ಅಂಗವಾಗಿ ಜಿಲ್ಲೆಯ ಎಲ್ಲಾ ವೈದ್ಯಾಧಿಕಾರಿಗಳಿಗೆ "ಜನನ ಪೂರ್ವ ರೋಗ ಪರೀಕ್ಷೆ ತಂತ್ರಜ್ಞಾನ ನಿಯಂತ್ರಣ ಮತ್ತು ದುರ್ಬಳಕೆ ತಡೆ ಕಾಯ್ದೆ–1994 (ಪಿಸಿ–ಪಿಎನ್‌ಡಿಟಿ) ಕುರಿತಾದ ಒಂದು ದಿನದ ತರಬೇತಿ ಮತ್ತು ಜಾಗೃತಿ ಅಭಿಯಾನ ನಡೆಯಿತು. ತರಬೇತಿ ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಎನ್.ಪವಿತ್ರಾ



ಅವರು, ಪಿಸಿಪಿಎನ್‌ಡಿಟಿ ಕಾಯ್ದೆಯ ಹಾಗೂ ಪ್ರಧಾನಮಂತ್ರಿ ಮಾತೃವಂದನಾ ಯೋಜನೆ ಬಗ್ಗೆ ವಿವರವಾಗಿ ಮಾಹಿತಿ ನೀಡಿದರು. ಜಿಲ್ಲೆಯಲ್ಲಿ ಪ್ರಸ್ತುತ ಆಗುತ್ತಿರುವ ಬಾಲ್ಯವಿವಾಹಗಳನ್ನು ತಡೆಯುವ ನಿಟ್ಟಿನಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳ ಅಧಿಕಾರಿಗಳ ಪಾತ್ರ ಬಹಳ ಪ್ರಮುಖವಾಗಿದೆ ಎಂದು ತಿಳಿಸಿದರು.

ಈ ಕಾರ್ಯಾಗಾರದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಜಿ.ಪಿ.ರೇಣುಪ್ರಸಾದ್ ಮಾತನಾಡಿ, ಜಿಲ್ಲೆಯಲ್ಲಿರುವ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಬಗ್ಗೆ ಮತ್ತು ಪಿಸಿಪಿಎನ್‌ಡಿಟಿ ಕಾಯ್ದೆಯ ಭಿತ್ತಿ ಪತ್ರಗಳನ್ನು ಪ್ರದರ್ಶಿಸುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಅಭಿನವ್, ಜಿಲ್ಲಾ ಕುಷ್ಠರೋಗ ನಿಯಂತ್ರಣಾಧಿಕಾರಿ ಡಾ.ನಾಗರಾಜ್, ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಸುಧಾ, ಕಾರ್ಯಕ್ರಮ ವ್ಯವಸ್ಥಾಪಕ ಪ್ರಫುಲ್ಲಚಂದ್ರ, ಜಿಲ್ಲಾ ಮಿಷನ್ ಸಂಯೋಜಕ ಬಿ.ವಿನಯ್, ಜೆಂಡರ್ ಸ್ಪೆಷಲಿಸ್ಟ್ ಡಿ.ಗೀತಾ, ಪಿಎಂಎಂವಿವೈ ಸಂಯೋಜಕ ಚೇತನ್ ಇದ್ದರು.

## ಮಾನವರಾಗಿ ಸುತ್ತಮುತ್ತಲಿನ ಪರಿಸರವನ್ನು ಸಂರಕ್ಷಿಸಿಕೊಳ್ಳಬೇಕು



» **ದಾವಣಗೆರೆ**

ಮಾನವರಾಗಿ ನಾವು ಮಾಡಬಹುದಾದ ಅತ್ಯುತ್ತಮ ಕೆಲಸವೆಂದರೆ ಸುತ್ತುತ್ತಲಿನ ಪರಿಸರವನ್ನು ಸಂರಕ್ಷಿಸಿಕೊಳ್ಳಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮಾ. ಕರೆಣ್ಣವರ್ ತಿಳಿಸಿದರು. ಶುಕ್ರವಾರ(28) ರಂದು ಕುಂದುವಾಡ ಹತ್ತಿರದ ಕೆ.ಎಚ್.ಬಿ.ಕಾಲೊನಿಯಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಜಿಲ್ಲಾ ನ್ಯಾಯಾಂಗ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಾನಗರಪಾಲಿಕೆ ಮತ್ತು ಅರಣ್ಯ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸಲಾದ ವಿಶ್ವ ಪರಿಸರ ದಿನಾಚರಣೆಯ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಒಬ್ಬ ಮನುಷ್ಯ ಗಿಡ ಮರ ನೆಟ್ಟು, ಪೋಷಿಸುವುದರಿಂದ ಈ ಜಗತ್ತಿನ ಮತ್ತೊಬ್ಬ ಮನುಷ್ಯನಿಗೆ ಸಹಾಯ ಮಾಡಿದಂತಾಗುವುದು, ಆ ಮೂಲಕ ನಾವು ಜಗತ್ತಿಗೆ ಋಣ ಸಂದಾಯ ಮಾಡಿದಂತಾಗುತ್ತದೆ. ಆದ್ದರಿಂದ ಪ್ರತಿಯೊಬ್ಬರೂ ಪರಿಸರ ಸಂರಕ್ಷಣೆ ಮಾಡಬೇಕು ಎಂದು ಕರೆ ನೀಡಿದರು.ಒಂದು ಗಿಡ ನೆಟ್ಟು ಪೋಷಿಸುವ ಪ್ರತಿಯೊಂದು ಮಹೊನ್ನತ ಕೆಲಸವೂ ಮನುಷ್ಯನ ಮುಖವನ್ನು ಹೆಚ್ಚು ಆಕರ್ಷಣೀಯ ಮತ್ತು ಶ್ರೀಮಂತಗೊಳಿಸುತ್ತದೆ. ಪರಿಸರದ ಸಂರಕ್ಷಣೆಯಂತಹ ಕಾರ್ಯಕ್ಕೆ ಸಮನಾವಾಗಿರುವುದು ಬೇರಾವುದೂ ಇಲ್ಲ ಎಂದರು.

## ಪ್ರಮುಖ ಸುದ್ದಿ

### ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ ಅಭಿಮತ


# ಕುಟುಂಬ ಯೋಜನೆ ಅನುಷ್ಠಾನ: ಒಂದೆರಡು ಕುಟುಂಬದ ಕತೆಯಲ್ಲ, ಇದು ಮನೆ ಮನಗಳ ಮಾತಾಗಬೇಕು

» **ಚಿತ್ರದುರ್ಗ**

ಕುಟುಂಬ ಯೋಜನೆ ಒಂದೆರಡು ಕುಟುಂಬದ ಕಥೆಯಾಗದೆ ಮನೆ ಮನಗಳ ಮಾತಾಗಬೇಕು. ಚಿಕ್ಕ ಕುಟುಂಬದ ಆದರ್ಶ ಪಾಲಿಸಿದಲ್ಲಿ ಸುಖಿ ಜೀವನ ಹೊಂದಬಹುದು ಎಂದು ಚಿತ್ರದುರ್ಗ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್ ಹೇಳಿದರು.

ಇಲ್ಲಿನ ಮಾರುತಿ ನಗರ ಆರೋಗ್ಯ ಕೇಂದ್ರದಲ್ಲಿ ಶುಕ್ರವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ಅತ್ತೆ ಸೊಸೆಯರಿಗೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ವಿಶ್ವ ಜನಸಂಖ್ಯಾ ದಿನಾಚರಣೆ ಅಂಗವಾಗಿ ಜನಸಂಖ್ಯಾ ಸ್ಥಿರತೆ ಕಾಪಾಡುವ ನಿಟ್ಟಿನಲ್ಲಿ ಸಮುದಾಯ ಜಾಗೃತಿಕರಣ ಮಾಡುವುದು ನಮ್ಮ ಜವಾಬ್ದಾರಿಯಾಗಿದೆ. ಸಾರ್ವಜನಿಕರಲ್ಲಿ ವಿಭಿನ್ನವಾದ ಮನಸ್ಸುಗಳಿದ್ದು, ಕೆಲವರಿಗೆ ಚಿಕ್ಕ ಕುಟುಂಬ ಅನುಸರಿಸುವುದು. ಕೆಲವರಿಗೆ ಹಲವು ಮಕ್ಕಳ ಬಯಕೆ ಇವು ಸರ್ವೇಸಾಮಾನ್ಯ. ಆಧುನಿಕ ಯುಗದಲ್ಲಿ ಮಕ್ಕಳಿಗೆ ಸಮಾನ ಶಿಕ್ಷಣ ಸಮಾನ ಸವಲತ್ತುಗಳನ್ನು ಒದಗಿಸುವುದು ಪೋಷಕರ ಜವಾಬ್ದಾರಿಯಾಗಿದ್ದು, ಚಿಕ್ಕ ಕುಟುಂಬ ಇದ್ದಲ್ಲಿ ಮನೆಯ ಎಲ್ಲಾ ಮಕ್ಕಳಿಗೆ ಶಿಕ್ಷಣ ಕೊಡಿಸುವುದರ



ಜೊತೆಗೆ ಉತ್ತಮ ಸಮಾಜ ನಿರ್ಮಾಣ ಮಾಡಬಹುದಾಗಿದೆ ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ ಮೂಗಪ್ಪ ಮಾತನಾಡಿ, ತಾಯಿ ಮರಣ ಮತ್ತು ಶಿಶು ಮರಣ ತಪ್ಪಿಸುವ ನಿಟ್ಟಿನಲ್ಲಿ ಒಂದು ಮಗುವಿಂದ ಮತ್ತೊಂದು ಮಗುವಿಗೆ ಕನಿಷ್ಠ ಮೂರು ವರ್ಷಗಳು ಅಂತರಬೇಕಾಗುತ್ತದೆ. ಜಮೀನಿನಲ್ಲಿ ಬತ್ತವನ್ನ ದೂರ ದೂರ ಹಚ್ಚಿದಾಗ ಮಾತ್ರ ಚೆನ್ನಾಗಿ ಫಸಲು ಬರುತ್ತದೆ, ತೆಂಕಿನ ಮರ ಒಂದರ ಪಕ್ಕದಲ್ಲಿ ಒಂದು ಬೆಳೆಸಿದರೆ ಯಾವ ಮರವು ಪಸಲು ಬಿಡಲಾಗದು, ಅದೇ ರೀತಿ ಒಂದು ಮಗುವಿಗೆ ಜನ್ಮ ನೀಡುವಾಗ ತಾಯಿಯು ಮಗುವಿಗೆ ರಕ್ತವನ್ನು ಹಂಚಿಕೊಳ್ಳಬೇಕಾಗುತ್ತದೆ. ಬಾಣಂತಿಯ ಆರೋಗ್ಯ ಸರಿ ಹೊಂದಬೇಕಾದರೆ ಕಾಲಾವಕಾಶ ಬೇಕು. ಆರು ತಿಂಗಳ ಬಾಣ್ತಿ ಮೂರು ತಿಂಗಳ ಗರ್ಭಿಣಿಯಾದರೆ ಜನ್ಮ ನೀಡಿದ ಮಗುವಿಗೆ ಕನಿಷ್ಠ ಎರಡು ವರ್ಷದತನಕ ತಾಯಿಯ ಎದೆ ಹಾಲು ಬೇಕು.

ಹೊಟ್ಟೆಯಲ್ಲಿ ಬೆಳೆಯುವ ಭ್ರೂಣಕ್ಕೆ ಯಾವ ರೀತಿ ಪೋಷಕಾಂಶಗಳು ಸಿಗಬಹುದು ಎಂಬುದನ್ನ ಚಿಂತನೆ ಮಾಡಬೇಕಾಗಿದೆ. ಇಲ್ಲವಾದಲ್ಲಿ ದಿನತುಂಬದ ಹೆರಿಗೆ, ಹೆರಿಗೆಯ ಸಮಯದಲ್ಲಿ ತಾಯಿಗೆ ರಕ್ತಸ್ರಾವ, ತಾಯಿ ಮರಣ ಇಲ್ಲವೇ ಶಿಶುಮರಣ ಆಗಬಹುದು. ಇವುಗಳಿಗೆ ಕಡಿವಾಣ ಹಾಕಬೇಕಾದರೆ ಕುಟುಂಬ ಕಲ್ಯಾಣ ತಾತ್ಕಾಲಿಕ ವಿಧಾನಗಳು ಉಚಿತವಾಗಿ ಎಲ್ಲಾ ಸರ್ಕಾರಿ ಆರೋಗ್ಯ ಸಂಸ್ಥೆಗಳಲ್ಲಿ ಲಭ್ಯ ಇದ್ದು, ಇದರ ಸದುಪಯೋಗ ಪಡಿಸಿಕೊಳ್ಳಬೇಕೆಂದು ಸಾರ್ವಜನಿಕರಿಗೆ ಕರೆ ನೀಡಿದರು.

ಒಂದೆರಡು ಮಕ್ಕಳ ಜನನದ ನಂತರ ಸ್ವಯಂ ಪ್ರೇರಿತವಾಗಿ ತಾಯಂದಿರೇ ಮಕ್ಕಳು ಬೇಡವೆಂದು ನಿರ್ಧರಿಸಿ ಕುಟುಂಬ ಕಲ್ಯಾಣ ಶಾಶ್ವತ ವಿಧಾನವನ್ನು ಅನುಸರಿಸಲು ಮುಂದೆ ಬರುತ್ತಾರೆ. ಆದರೆ ಪುರುಷ ಸಂತಾನ ನಿರೋಧ ಶಸ್ತ್ರಚಿಕಿತ್ಸೆ ಒಂದು ಸೂಕ್ತ ಸರಳ ವಿಧಾನ, ಹೊಲಿಗೆ ಇಲ್ಲ, ಗಾಯ ಇಲ್ಲ, ಆಸ್ಪತ್ರೆಯಲ್ಲಿ ತಂಗುವ ಹಾಗೆ ಇಲ್ಲ, ಪುರುಷರಲ್ಲಿ ದೈಹಿಕ ನಿಶಕ್ತಿ ಉಂಟಾಗುವುದಿಲ್ಲ, ಲೈಂಗಿಕ ಸಂಪರ್ಕದಲ್ಲಿ ಯಾವುದೇ ಅಡ್ಡಿ ಆತಂಕ ಇರುವುದಿಲ್ಲ, ಇಂತಹ ಸರಳ ವಿಧಾನದ ಕಡೆಗೆ ಸಾಕ್ಷರತೆ ಹೊಂದಿದ ನಾವುಗಳು ಮುಂದೆ ಬಂದು ಸೂಕ್ತ ಶಸ್ತ್ರಚಿಕಿತ್ಸೆ ಮಾಡಿಸಿಕೊಂಡು ಕುಟುಂಬದಲ್ಲೆ ದಂಪತಿಗಳು ಸುಖಮಯ ದಾಂಪತ್ಯ ಜೀವನ ನಡೆಸಬಹುದು ಎಂದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಬಿ ಜಾನಕಿ ಮಾತನಾಡಿ, ಕುಟುಂಬದಲ್ಲಿ ಹೆಣ್ಣು ಗಂಡು ಎಂಬ ಭೇದವಿಲ್ಲದೆ ಅಪಾಯದ ಅಂಚಿನಲ್ಲಿರುವ ತಾಯಂದಿರುಗಳಿಗೆ ಕುಟುಂಬಯೋಜನೆಅಳವಡಿಸುವುದಕ್ಕಿಂತ ಪುರುಷರು ಮುಂದೆ ಬಂದು ಶಸ್ತ್ರ ಚಿಕಿತ್ಸೆ ಮಾಡಿಸಿಕೊಂಡು ಅಂದೆ ಕೆಲಸ ಕಾರ್ಯಗಳಲ್ಲಿ ತೊಡಗಬಹುದು. ತಾಯಂದಿರಿಗೆ ತಾತ್ಕಾಲಿಕ ವಿಧಾನಗಳಾದ ಡಿಮ್ಪ ಇಂಜೆಕ್ಷನ್, ವಾರಕ್ಕೊಮ್ಮೆ ಛಾಯಾ ಮಾತ್ರೆಗಳು, ವಂಕಿ ಅಳವಡಿಕೆ, ಪುರುಷರಿಗೆ ನಿರೋದ್‌ಗಳು ಉಚಿತವಾಗಿ ಲಭ್ಯವಿದ್ದು, ಇದರ ಸದುಪಯೋಗ ಪಡಿಸಿಕೊಂಡು ಜನಸಂಖ್ಯಾ ಸ್ಥಿರತೆ ಕಾಪಾಡಿ ಸುಖೀ ಕುಟುಂಬದತ್ತ ದಾಪುಗಾಲು ಹಾಕಬಹುದು ಎಂದರು.

ಆರೋಗ್ಯ ನಿರೀಕ್ಷಣಾಧಿಕಾರಿ ಗಂಗಾಧರ ರೆಡ್ಡಿ ಮಾತನಾಡಿ, ಆಶಾ ಕಾರ್ಯಕರ್ತೆಯರು ಆರೋಗ್ಯ ಅಧಿಕಾರಿ ವೃಂದದವರು, ಸಾರ್ವಜನಿಕರ ಮನೆ ಬಾಗಿಲಿಗೆ ಬಂದು ಕುಟುಂಬ ಯೋಜನೆಗಳ ಬಗ್ಗೆ ಸದಾ ಮಾಹಿತಿ ನೀಡುತ್ತಿರುತ್ತಾರೆ. ಹೆಚ್ಚಿನ ಆರೋಗ್ಯ ಮಾಹಿತಿಗಾಗಿ 104ಕ್ಕೆ ಕರೆ ಮಾಡಿ ಮಾಹಿತಿ ಪಡೆಯಬಹುದು ಎಂದರು.

ಈ ಸಂದರ್ಭದಲ್ಲಿ ಹಿರಿಯ ಪ್ರಾಥಮಿಕ ಆರೋಗ್ಯ ಸುರಕ್ಷತಾ ಅಧಿಕಾರಿ ತಿಪ್ಪಮ್ಮ. ಹೆಚ್‌ಐಓ ಸುಪ್ರೀತಾ. ಪಿಎಚ್‌ಸಿಓ ರೂಪ, ಲಕ್ಷ್ಮಮ್ಮ, ಎನ್‌ಸಿ ರೂಪ, ಭಾಗ್ಯಲಕ್ಷ್ಮಿ ಸೇರಿದಂತೆ 25ಕ್ಕೂ ಹೆಚ್ಚು ಅತ್ತೆ ಸೊಸೆಯರು ಮತ್ತು ಪುರುಷರು ಹಾಜರಿದ್ದರು.

## ಫಾಸ್ಟ್ ನ್ಯೂಸ್

### ವಿದ್ಯುತ್ ಗೋಪುರ ಮುಟ್ಟದಂತೆ ಸಾರ್ವಜನಿಕರಿಗೆ ಸೂಚನೆ

» **ಚಿತ್ರದುರ್ಗ**

ಶಿವಮೊಗ್ಗ ಯುಟಿಪಿ ವಿಭಾಗ ಕರ್ನಾಟಕ ನೀರಾವರಿ ನಿಗಮದ ಕಾರ್ಯಪಾಲಕ ಇಂಜಿನಿಯರ್ ಅವರು ಸ್ವಂತ ನಿರ್ವಹಣೆ ಯೋಜನೆಯಡಿಯಲ್ಲಿ 3530ಕೆವಿಎ 66ಕೆವಿ ದರ್ಜೆ ಸಾಮರ್ಥ್ಯದ ವಿದ್ಯುತ್‌ನ್ನು ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ತಾಲ್ಲೂಕಿನ ಕಾಗಲಗೆರೆ ಗ್ರಾಮದಲ್ಲಿ ಏತ ನೀರಾವರಿ ಯೋಜನೆಗೆ ಸಂಪರ್ಕ ಕಲ್ಪಿಸಲು 6.818 ಕಿ.ಮೀ ಉದ್ದದ 66ಕೆವಿ ಪ್ರಸರಣ ಮಾರ್ಗವನ್ನು ಹಾಲಿ ಇರುವ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮದ 66/11ಕೆವಿ ಸಾಸಲುಹಳ್ಳ ವಿದ್ಯುತ್ ಕೇಂದ್ರದಿಂದ ಉದ್ದೇಶಿತ 66/6.6ಕೆವಿ ಕಾಗಲಗೆರೆ ಏತ ನೀರಾವರಿ ಪಂಪಿಂಗ್ ಯಾರ್ಡ್ ವಿದ್ಯುತ್ ಕೇಂದ್ರದವರೆಗೆ ಕಾಮಗಾರಿ ಪೂರ್ಣಗೊಂಡಿದೆ. ಈ 66 ಕೆವಿ ವಿದ್ಯುತ್ ಮಾರ್ಗವನ್ನು ಜುಲೈ 1 ರಂದು ಅಥವಾ ತದನಂತರ ದಿನಗಳಲ್ಲಿ ಚೇತನಗೊಳಿಸುತ್ತಿರುವುದರಿಂದ 66ಕೆವಿ ಪ್ರಸರಣ ಮಾರ್ಗದ ವಿದ್ಯುತ್ ಗೋಪುರಗಳನ್ನು ಸಾರ್ವಜನಿಕರುಮುಟ್ಟುವುದಾಗಲಿ,ಹತ್ತುವುದಾಗಲಿ, ಮರದ ರೆಂಬೆ, ಲೋಹದ ತಂತಿಗಳನ್ನು ಹಾಗೂ ಇತರೆ ಯಾವುದೇ ವಸ್ತುಗಳನ್ನು ಮಾರ್ಗದ ಮೇಲೆ ಎಸೆಯುವುದಾಗಲಿ ಮತ್ತು ಗೋಪುರಗಳಿಗೆ ಜಾನುವಾರುಗಳನ್ನು ಕಟ್ಟುವುದಾಗಲಿ ಮಾಡಬಾರದು ಎಂದು ಎಚ್ಚರಿಕೆ ನೀಡಲಾಗಿದೆ. ಈ ಮಾರ್ಗದ ಮೊಗಸಾಲೆಯಲ್ಲಿ ಅಪಾಯದ ಮಟ್ಟದಲ್ಲಿರುವ ಮರಗಳನ್ನು ಸುರಕ್ಷತೆ ದೃಷ್ಟಿಯಿಂದ ತೆಗೆದು ಹಾಕಲು ನಿಗಮದ ನಿಯಮಾನುಸಾರ ಸೂಕ್ತ ಪರಿಹಾರ ತೆಗೆದುಕೊಂಡು, ಮರಗಳನ್ನು ತೆಗೆಯದೇ ಇರುವ ಭೂ ಮಾಲೀಕರು ಕೂಡಲೇ ಮಾರ್ಗದ ಮೊಗಸಾಲೆಯಲ್ಲಿ ಇರುವ ಮರಗಳನ್ನು ಕಡಿದು ಹಾಕಲು ಅನುಮತಿ ನೀಡಬೇಕು. ಒಂದು ವೇಳೆ ಈ ಎಚ್ಚರಿಕೆಯನ್ನು ಉಲ್ಲಂಘಿಸಿದಲ್ಲಿ ವಿದ್ಯುತ್ ಮಾರ್ಗದಿಂದ ಸಾರ್ವಜನಿಕರಿಗೆ ಆಗುವ ಹಾನಿ, ತೊಂದರೆ, ಅಪಘಾತಗಳಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮವು ಜವಾಬ್ದಾರಿಯಾಗಿರುವುದಿಲ್ಲ.

ವಿದ್ಯುತ್ ಮಾರ್ಗವು ಮಲ್ಲೇನಹಳ್ಳಿ, ಸಾಸಲು ಹಾಗೂ ಮುತ್ತೂಗದೂರು ಗ್ರಾಮಗಳ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಹಾದುಹೋಗಲಿವೆ ಎಂದು ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ಬೃಹತ್ ಕಾಮಗಾರಿ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

### ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯ ಪ್ರವೇಶಕ್ಕೆ ಅರ್ಜಿ

» **ಚಿತ್ರದುರ್ಗ**

ಚಿತ್ರದುರ್ಗ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ 2024-25ನೇ ಸಾಲಿಗೆ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ-1, 2ಎ, 2ಬಿ, 3ಎ, 3ಬಿ, ಪ.ಜಾತಿ, ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 10 ಕೊನೆಯ ದಿನಾಂಕವಾಗಿದೆ. ವಿದ್ಯಾರ್ಥಿಗಳು https://shp.karnataka.gov.in/bcwd ಜಾಲತಾಣದ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿ ಸಲ್ಲಿಸಲು ಪ್ರವರ್ಗ-1, ಎಸ್.ಸಿ. ಮತ್ತು ಎಸ್.ಟಿ ವರ್ಗದ ವಾರ್ಷಿಕ ಆದಾಯ 1 ಲಕ್ಷ, ಹಾಗೂ ಪ್ರವರ್ಗ-2ಎ, 2ಬಿ,3ಎ, 3ಬಿ, ಇತರೆ ಹಿಂದುಳಿದ ವರ್ಗಗಳ ವಾರ್ಷಿಕ ಆದಾಯ ರೂ.44500/- ಮೀರಿರಬಾರದು.ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿ ನಿಲಯಗಳ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ https://bcwd.karnataka.gov.in/ನ್ನು ಪರಿಶೀಲಿಸಬಹುದು. ಅರ್ಜಿ ಸಲ್ಲಿಸಲು ತಾಂತ್ರಿಕ ದೋಷಗಳು ಉಂಟಾದಲ್ಲಿ bcwdhelpline@gmail.com ಇ-ಮೇಲ್ ಮುಖಾಂತರ ಅಥವಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ, ತಾಲ್ಲೂಕು ಅಧಿಕಾರಿಗಳನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸಲು ಸೂಚಿಸಿದೆ. ಹೆಚ್ಚಿನ ಮಾಹಿತಿಗಾಗಿ ಸಂಪರ್ಕಿಸಬಹುದಾದ ಸಹಾಯವಾಣಿ ಸಂಖ್ಯೆ 8050770004, 8050770005 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ಸೌಲಭ್ಯಗಳಿಗಾಗಿ ಅರ್ಜಿ

» **ದಾವಣಗೆರೆ**

ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ಹೊನ್ನಾಳಿ ಮತ್ತು ನ್ಯಾಮತಿ ತಾಲ್ಲೂಕಿನಲ್ಲಿ ಸಮುದಾಯ ಕೃಷಿಹೊಂಡ, ಕೃಷಿಹೊಂಡ, ಪ್ಯಾಕ್‌ಹೌಸ್, ಟ್ರ್ಯಾಕ್ಟರ್ 20 ಪಿಟಿಒ ಎಚ್‌ಪಿ ಒಳಗಿನ ಪ್ರಾಥಮಿಕ ಸಂಸ್ಕರಣಾ ಘಟಕ ಮತ್ತು ಎಸ್.ಎಂ.ಎ.ಎಂ. ಯೋಜನೆಯಡಿಯಲ್ಲಿ ಅಡಿಕೆ ಸಿಪ್ಪೆ ಸುಲಿಯುವ ಯಂತ್ರ ಹಾಗೆ ಫೈಬರ್ ದೋಟಿ (ಅಡಿಕೆ ಕಟಾವು ಮಾಡಲು) ಪ್ರಸಕ್ತ ಆರ್ಥಿಕ ಸಾಲಿನಲ್ಲಿ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ.

**ಬಾಲ್ಯ ವಿವಾಹ ಕಂಡು ಬಂದಲ್ಲಿ ಪೋಷಕರ ಮೇಲೆ ಪ್ರಕರಣ ದಾಖಲಿಸಲು ಸೂಚನೆ**

# ಏಪ್ರಿಲ್, ಮೇನಲ್ಲಿ 25 ಬಾಲ್ಯ ವಿವಾಹಗಳ ತಡೆ

» **ದಾವಣಗೆರೆ**

ಪ್ರಸಕ್ತ ವರ್ಷದ ಏಪ್ರಿಲ್ ಮತ್ತು ಮೇ ತಿಂಗಳಲ್ಲಿ 26 ಬಾಲ್ಯ ವಿವಾಹ ಪ್ರಕರಣಗಳು ವರದಿಯಾಗಿದ್ದು ಇದರಲ್ಲಿ 25 ನ್ನು ತಡೆಗಟ್ಟಿ 2 ಪ್ರಕರಣಗಳಲ್ಲಿ ನ್ಯಾಯಾಲಯದಿಂದ ತಡೆಯಾಜ್ಞೆ ತರಲಾಗಿದೆ. ಎಲ್ಲಾದರೂ ಬಾಲ್ಯ ವಿವಾಹ ಕಂಡು ಬಂದಲ್ಲಿ, ಅಂತಹ ಪೋಷಕರ ಮೇಲೆ ಪ್ರಕರಣ ದಾಖಲಿಸುವಂತೆ ಜಿಲ್ಲಾಧಿಕಾರಿ ಡಾ; ವೆಂಕಟೇಶ್ ಎಂ.ವಿ ತಿಳಿಸಿದರು.



ಅವರು ಶುಕ್ರವಾರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾ ಮಟ್ಟದ ಮಕ್ಕಳ ಕಲ್ಯಾಣ ಹಾಗೂ ರಕ್ಷಣಾ ಸಮಿತಿ ಪರಿಶೀಲನಾ ಸಭೆ, ಬಾಲ್ಯ ವಿವಾಹ ನಿಷೇಧ ಕಾಯ್ದೆ ಪ್ರಗತಿ ಪರಿಶೀಲನಾ ಸಭೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಬಾಲ್ಯವಿವಾಹ ಒಂದು ಸಾಮಾಜಿಕ ಪಿಡುಗಾಗಿದ್ದು, ಇದನ್ನು ತಡೆಗಟ್ಟಲು ವ್ಯಾಪಕವಾಗಿ ಜನ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕಾಗಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ ಹಾಗೂ ಇನ್ನಿತರೆ ಇಲಾಖೆಗಳಿಂದ ಬರುವ ಜುಲೈ ತಿಂಗಳಲ್ಲಿ ಎಲ್ಲಾ ಶಾಲಾ, ಕಾಲೇಜುಗಳಲ್ಲಿ ಬಾಲ್ಯ ವಿವಾಹ ನಿಷೇಧ ಕಾಯ್ದೆ ಕುರಿತು ಜಾಗೃತಿ ಕಾರ್ಯಕ್ರಮಗಳನ್ನು ಅಭಿಯಾನದ ರೀತಿ ಆಯೋಜಿಸಲು ಸೂಚಿಸಿದರು.

ಕಾರ್ಮಿಕರ ಮಕ್ಕಳು, ತಾಂಡಾಗಳಲ್ಲಿ ಮತ್ತು ಪರಿಶಿಷ್ಠ ಜಾತಿ ಹಾಗೂ ಪರಿಶಿಷ್ಠ ಪಂಗಡಗಳ ಕುಟುಂಬಗಳಲ್ಲಿ ಹೆಚ್ಚಾಗಿ ಬಾಲ್ಯ ವಿವಾಹಗಳುವರದಿಯಾಗುತ್ತಿರುವುದರಿಂದ ಕಾರ್ಮಿಕ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಗಳಿಂದ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕೆಂದು ತಿಳಿಸಿದರು.

ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅಭಿವೃದ್ಧಿ ಅಧಿಕಾರಿಗಳು ನರೇಗಾ ಕೂಲಿ ಕಾರ್ಮಿಕರಿಗೆ ಮತ್ತು ಸಾರ್ವಜನಿಕರಿಗೆ ಅರಿವು ಕಾರ್ಯಕ್ರಮಗಳನ್ನುಹಮ್ಮಿಕೊಳ್ಳಲು ತಿಳಿಸಿ, ಬಾಲ್ಯವಿವಾಹ ನಡೆಯದೆ ಇರುವ ಮತ್ತು ಹದಿಹರೆಯದ ಬಾಲಕಿಯರು, ಗರ್ಭಿಣಿ ಆಗದೆ ಇರುವಂತಹ ಪ್ರಕರಣಗಳನ್ನು ಗಮನದಲ್ಲಿ ಇಟ್ಟುಕೊಂಡು ಅತ್ಯುತ್ತಮವಾಗಿ ಕಾರ್ಯನಿರ್ವಹಿಸಿರುವ ಗ್ರಾಮ ಪಂಚಾಯಿತಿಗಳಿಗೆ ಪ್ರಶಂಸನಾ ಪತ್ರ ನೀಡಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳಪ್ರಾಧಿಕಾರದಸದಸ್ಯಕಾರ್ಯದರ್ಶಿ ಮಹಾವೀರ ಮಾ. ಕರೆಣ್ಣವರ್ ಮಾತನಾಡಿ ಮಕ್ಕಳ ಬಾಲ್ಯ ವಿವಾಹದಿಂದಾಗುವ ಪರಿಣಾಮಗಳ ಬಗ್ಗೆ ತಿಳಿಸಬೇಕು. ಬಾಲ್ಯ ವಿವಾಹ ಮಾಡುವುದರಿಂದ ಉಂಟಾಗುವ ಕಾನೂನಾತ್ಮಕ ತೊಡಕುಗಳ ಬಗ್ಗೆ ಪೋಷಕರಲ್ಲಿ ಮನವರಿಕೆ ಮಾಡಿಕೊಡಬೇಕೆಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರಾದ ವಾಸಂತಿ ಉಪ್ಪಾರ್ ಮಾತನಾಡಿ ಪ್ರಸಕ್ತ ಸಾಲಿನಲ್ಲಿ 2024 ರ ಏಪ್ರಿಲ್, ಮೇ ತಿಂಗಳಲ್ಲಿ ಒಟ್ಟು 26 ದೂರುಗಳು ಬಂದಿದ್ದು, ಅವುಗಳಲ್ಲಿ 25 ಬಾಲ್ಯವಿವಾಹಗಳನ್ನು ತಡೆದು 2 ಪ್ರಕರಣಗಳಲ್ಲಿ ಕೋರ್ಟ್‌ನಿಂದ ತಡೆಯಾಜ್ಞೆ ಪಡೆಯಲಾಗಿದೆ. 1 ಪ್ರಕರಣದಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ. ಬಾಲ ನ್ಯಾಯ ಮಂಡಳಿಯಲ್ಲಿ ಹಿಂದಿನ 54, ಹೊಸದಾಗಿ 20 ಸೇರಿ 74, ಇದರಲ್ಲಿ 11 ಖುಲಾಸೆಯಾಗಿವೆ. ಪೋಕ್ಸೊದಡಿ 10 ಪ್ರಕರಣಗಳಿದ್ದು 2 ಖುಲಾಸೆಯಾಗಿ 8 ಬಾಕಿ ಇವೆ. ಸರ್ಕಾರಿ ಬಾಲಕಿಯರ ಬಾಲ ಮಂದಿರದಲ್ಲಿ 61 ಹಾಗೂ ಬಾಲಕರ ಬಾಲ ಮಂದಿರದಲ್ಲಿ 32 ಮಕ್ಕಳಿದ್ದಾರೆ. ಇದರಲ್ಲಿ ಅನಾಥ ಮಕ್ಕಳು, ಏಕಪೋಷಕ ಮಕ್ಕಳು, ಇಬ್ಬರು ಪೋಷಕರಿರುವ ಮಕ್ಕಳು ಇದ್ದಾರೆ ಎಂದು ತಿಳಿಸಿದರು.

ಜಿ.ಪಂ. ಉಪಕಾರ್ಯದರ್ಶಿ ಕೃಷ್ಣನಾಯ್ಕ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಷಣ್ಮುಖಪ್ಪ ಹಾಗೂ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಮನೆಯ ಸುತ್ತಲಿನ ಪರಿಸರವನ್ನು ಸೊಳ್ಳೆ ಉತ್ಪತ್ತಿ ತಾಣಗಳಿಂದ ಮುಕ್ತಗೊಳಿಸಿ

» **ದಾವಣಗೆರೆ**

ನಮ್ಮ ಸಣ್ಣ ನಿರ್ಲಕ್ಷ್ಯ ಕೂಡ ಡೆಂಗಿಜ್ವರದಿಂದ ನರಳುವಂತೆ ಮಾಡಬಹುದು, ಆದ್ದರಿಂದ ಮನೆಯ ಸುತ್ತಮುತ್ತಲಿನ ಪರಿಸರವನ್ನು ಸೊಳ್ಳೆ ಉತ್ಪತ್ತಿ ತಾಣಗಳಿಂದ ಮುಕ್ತಗೊಳಿಸಿ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸುರೇಶ್ ಬಿ.ಇಟ್ನಾಳ್ ತಿಳಿಸಿದರು.




ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವತಿಯಿಂದ ರಾಮನಗರ ಎಸ್.ಓ.ಜಿ. ಕಾಲೋನಿಯಲ್ಲಿ 'ಡೆಂಗಿ ಜ್ವರ ನಿಯಂತ್ರಣ, ನಮ್ಮೆಲ್ಲರ ಜವಬ್ದಾರಿ' ವಾರಕ್ಕೆ ಒಂದು ದಿನ ಪ್ರತಿ ಶುಕ್ರವಾರ ಈಡಿಸ್ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶ ಮಾಡುವ ದಿನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ನಾವು ಬಳಸಿ ಎಸೆಯುವ ಟೀಕಫ್, ಪ್ಲಾಸ್ಟಿಕ್ ಬಾಟಲ್, ಡಬ್ಬಗಳು, ನಿರುಪಯುಕ್ತ ವಸ್ತುಗಳಲ್ಲಿ ಮಳೆಗಾಲದಲ್ಲಿ ನೀರು ಸಂಗ್ರಹವಾಗುವುದರಿಂದ ಈಡಿಸ್ ಸೊಳ್ಳೆಯ ಲಾರ್ವಾಗಳು ಬೆಳೆಯುತ್ತವೆ. ಮನೆ, ಶಾಲಾ ಕಾಲೇಜು, ಕಚೇರಿ, ಅಂಗನವಾಡಿ, ಅಂಗಡಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಹಗಲು ಹೊತ್ತಿನಲ್ಲಿ ಈಡಿಸ್ ಸೊಳ್ಳೆಗಳಿಂದ ರಕ್ಷಣೆ ಪಡೆಯಲು ಸ್ವಚ್ಛತೆಗೆ ಆದ್ಯತೆ ನೀಡೋಣ ಎಂದರು.

ಆರೋಗ್ಯ ಇಲಾಖೆಯ ಸಿಬ್ಬಂದಿ ಮನೆ-ಮನೆಗೆ ಭೇಟಿ ನೀಡಿ, ಡೆಂಗಿಜ್ವರದಿಂದ ರಕ್ಷಿಸಿಕೊಳ್ಳಲು ನೀಡುವ ಸಲಹೆ-ಸೂಚನೆಗಳನ್ನು ತಪ್ಪದೇ ಪಾಲಿಸಿ, ಸ್ವಯಂರಕ್ಷಣಾ ವಿಧಾನಗಳನ್ನು ಅನುಸರಿಸೋಣ. ಸಾರ್ವಜನಿಕರಿಗೆ ಈ ಎಲ್ಲಾ ವಿಷಯದ ಬಗ್ಗೆ ತಿಳಿಸಬೇಕು ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಷಣ್ಮುಖಪ್ಪ.ಎಸ್, ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ. ಗಂಗಾಧರ್.ಕೆ.ಹೆಚ್. ತಾಲ್ಲೂಕು ಆರೋಗ್ಯಾಧಿಕಾರಿ, ಆರೋಗ್ಯ ಕಾರ್ಯಕರ್ತರು, ಆಶಾ ಕಾರ್ಯಕರ್ತೆಯರು ಹಾಜರಿದ್ದರು.

## ರಾಜ್ಯದ ಸಣ್ಣಕೈಗಾರಿಕೆಗಳ ಅಭಿವೃದ್ಧಿ ಮಂಡಳಿಗೆ ಹೆಚ್ಚಿನ ಆರ್ಥಿಕ ನೆರವು ಅಗತ್ಯ: ಶರಣಬಸಪ್ಪ ದರ್ಶನಾಪುರ




» **ಚಳ್ಳಕೆರೆ**

ಕರ್ನಾಟಕದಲ್ಲಿ ಸಣ್ಣಕೈಗಾರಿಕೆಗಳ ಅಭಿವೃದ್ಧಿಗೆ ಸರ್ಕಾರ ಹಲವಾರು ಯೋಜನೆಗಳ ಮೂಲಕ ಆರ್ಥಿಕ ನೆರವು ಒದಗಿಸಲಿದೆ. ನಿಗಮದ ನೂತನ ಅಧ್ಯಕ್ಷರಾಗಿ ಶಾಸಕ ಟಿ.ರಘುಮೂರ್ತಿ ಈಗಾಗಲೇ ಅಧಿಕಾರ ಪದಗ್ರಹಣ ಮಾಡಿದ್ದು ಅವರ ಮಾರ್ಗದರ್ಶನದಲ್ಲಿ ಸಣ್ಣಕೈಗಾರಿಕೆ ಇನ್ನೂ ಹೆಚ್ಚಿನ ಪ್ರಗತಿಯನ್ನು ಸಾಧಿಸಲಿದೆ ಎಂದು ಸಣ್ಣಕೈಗಾರಿಕೆ ಮತ್ತು ಸಾರ್ವಜನಿಕ ಉದ್ಯಮಿಗಳ ಸಚಿವ ಶರಣಬಸಪ್ಪದರ್ಶನಾಪುರ ತಿಳಿಸಿದರು. ಅವರು, ಬೆಂಗಳೂರಿನ ಸಣ್ಣಕೈಗಾರಿಕೆಗಳ ಅಭಿವೃದ್ಧಿ ನಿಗಮದ ಸಭಾಂಗಣದಲ್ಲಿ ಎಂಎಸ್‌ಎಂಇ ದಿನಾಚರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಇದೇ ಸಂದರ್ಭದಲ್ಲಿ ನಿಗಮದ ಅಧ್ಯಕ್ಷ ಟಿ.ರಘುಮೂರ್ತಿಯವರನ್ನು ಸನ್ಮಾನಿಸಲಾಯಿತು. ಕರ್ನಾಟಕದಲ್ಲಿ ಇನ್ನೂ ಹೆಚ್ಚಿನ ಕೈಗಾರಿಕೆಗಳ ಸ್ಥಾಪನೆಯಾಗಬೇಕಿದೆ, ಸರ್ಕಾರ ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಎಂದೂ ಹಿಂದೆ ಬಿದ್ದಿಲ್ಲವೆಂದರು.

ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ ಟಿ.ರಘುಮೂರ್ತಿ ಮಾತನಾಡಿ, ಮಂಡಳಿಯ ಅಧ್ಯಕ್ಷರಾಗಿ ಅಧಿಕಾರಿ ಸ್ವೀಕರಿಸಿ ಕೇವಲ ಎಂಟು ತಿಂಗಳಾಗಿದೆ, ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿಯ ಹಲವಾರು ಯೋಜನೆಗಳ ಬಗ್ಗೆ ಈಗಾಗಲೇ ಮುಖ್ಯಮಂತ್ರಿ, ಉಪಮುಖ್ಯಮಂತ್ರಿಗಳೊಂದಿಗೆ ಚರ್ಚೆ ನಡೆಸಿದ್ದೇನೆ. ರಾಜ್ಯದಲ್ಲಿ ಸಣ್ಣ ಕೈಗಾರಿಕೆ ಅಭಿವೃದ್ಧಿ ನಿಗಮ ನಿರೀಕ್ಷೆಗೂ ಮೀರಿ ಎತ್ತರ ಬೆಳೆಯಲಿದೆ ಎಂದರು.

## ಸಾರ್ವಜನಿಕರಿಗೆ ಉತ್ತಮ ಸೇವೆ ನೀಡುವಲ್ಲಿ ಅಂಚೆ ಇಲಾಖೆ ಸದಾಮುಂದು

» **ಚಳ್ಳಕೆರೆ**

ಕಳೆದ ಹಲವಾರು ದಶಕಗಳಿಂದ ಚಿತ್ರದುರ್ಗ ಜಿಲ್ಲೆಯೂ ಸೇರಿದಂತೆ ರಾಷ್ಟ್ರ, ಅಂತರಾಷ್ಟ್ರೀಯ ಮಟ್ಟದಲ್ಲಿ ಅಂಚೆಇಲಾಖೆ ತನ್ನದೇಯಾದ ಗುಣಮಟ್ಟದ ಸೇವೆಯ ಮೂಲಕ ಸಾರ್ವಜನಿಕರ ವಿಶ್ವಾಸವನ್ನು ಗೆಲ್ಲುವುದರಲ್ಲಿ ಯಶಸ್ವಿಯಾಗಿದೆ. ಸಾರ್ವಜನಿಕರ ಅನುಕೂಲಕ್ಕಾಗಿ ಅನೇಕ ಜನಪರ ಯೋಜನೆಗಳನ್ನು ಅಂಚೆ ಇಲಾಖೆ ಜಾರಿಗೊಳಿಸಿ ಜನರಿಗೆ ಉತ್ತಮ ಬದುಕು ರೂಪಿಸುವಲ್ಲಿ ಸಹಕಾರಿಯಾಗಿದೆ ಎಂದು ಚಿತ್ರದುರ್ಗ ವಿಭಾಗದ ಅಂಚೆ ಅಧೀಕ್ಷಕಿ ಕೆ.ಆರ್.ಉಷಾ ತಿಳಿಸಿದರು.




ಅವರು, ಶುಕ್ರವಾರ ನಗರದ ರೋಟರಿ ಬಾಲಭವನದಲ್ಲಿ ಚಿತ್ರದುರ್ಗ ವಿಭಾಗದ ಚಳ್ಳಕೆರೆ ಉಪವಿಭಾಗದ ಪರಶುರಾಮಪುರ, ತಳಕು, ನಾಯಕನಹಟ್ಟಿ, ಓಬಳಾಪುರ ಅಂಚೆಕಚೇರಿಗಳ ಸಹಯೋಗದೊಂದಿಗೆ ಹಮ್ಮಿಕೊಂಡಿದ್ದ ಅಂಚೆ ಜನಸಂಪರ್ಕ ಅಭಿಯಾನವನ್ನು ಜ್ಯೋತಿಬೆಳಗುವ ಮೂಲಕ ಉದ್ಘಾಟಿಸಿ ಮಾತನಾಡಿದರು. ಅಂಚೆ ಇಲಾಖೆಯ ವಿವಿಧ ಯೋಜನೆ, ಅವುಗಳ ಅನುಷ್ಠಾನ ಕುರಿತು ಮಾಹಿತಿ ನೀಡಿದರು.

## ಪ್ರಮುಖ ಸುದ್ದಿ

**ಆದಿಜಾಂಬವ ನಿಗಮದ ನೂತನ ಅಧ್ಯಕ್ಷ ಜಿ.ಎಸ್.ಮಂಜುನಾಥ ಅಭಿಮತ.**

# ದಲಿತರ ಸಮಸ್ಯೆ ನಿವಾರಿಸುವಲ್ಲಿ ಕಾಂಗ್ರೆಸ್ ಸದಾ ಮುಂದು

» **ಚಳ್ಳಕೆರೆ**

ಕರ್ನಾಟಕದಲ್ಲಿ ಕಳೆದ ಹಲವಾರು ದಶಕಗಳಿಂದ ಆದಿಜಾಂಬವ ಅಭಿವೃದ್ಧಿ ನಿಗಮ ಹಲವಾರು ಸಮಸ್ಯೆಗಳಿಂದ ಉತ್ತಮವಾಗಿ ಕಾರ್ಯನಿರ್ವಹಿಸಲು ಸಾಧ್ಯವಾಗಿಲ್ಲ. ರಾಜ್ಯದ ಆದಿಜಾಂಬವ ಜನಾಂಗದ ಅಭಿವೃದ್ಧಿಗಾಗಿ ನಿಗಮ ಸ್ಥಾಪನೆಯಾಗಿದ್ದು, ನಿಗಮದ ನೂತನ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿದ ಜಿ.ಎಸ್. ಮಂಜುನಾಥ ನಿಗಮದ ಸರ್ವತೋಮುಖ ಅಭಿವೃದ್ಧಿಗೆ ಶಕ್ತಿಮೀರಿ ಶ್ರಮಿಸಲಿ ಎಂದು ಶುಭಹಾರೈಸುವುದಾಗಿ ಮಾಜಿ ಸಚಿವ ಎಚ್.ಆಂಜನೇಯ ತಿಳಿಸಿದರು.



ಅವರು,ಕ್ಷೇತ್ರದಶಾಸಕಟಿ.ರಘುಮೂರ್ತಿ, ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ, ಮಾಜಿ ಸಂಸದ ಬಿ.ಎನ್.ಚಂದ್ರಪ್ಪ ಹಾಗೂ ಸಮಾಜದ ಹಲವಾರು ಮುಖಂಡರೊಡನೆ ಬೆಂಗಳೂರಿನ ಆದಿಜಾಂಬವ ಅಭಿವೃದ್ಧಿ ಕಚೇರಿಯಲ್ಲಿ ನೂತನ ಅಧ್ಯಕ್ಷರಾಗಿ ಪದಗ್ರಹಣ ಮಾಡಿದ ಜಿ.ಎಸ್. ಮಂಜುನಾಥರವರನ್ನು ಅಭಿನಂದಿಸಿ ಮಾತನಾಡಿದರು. ಚಿತ್ರದುರ್ಗ ಜಿಲ್ಲೆಯಲ್ಲಿ ಆದಿಜಾಂಬವ ಸಮುದಾಯ ಹೆಚ್ಚಿದ್ದು ಜಿಲ್ಲೆಯೂ ಸೇರಿದಂತೆ ರಾಜ್ಯದ ಜನಾಂಗದ ಅಭಿವೃದ್ಧಿಗೆ ಒತ್ತು ನೀಡಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸಿ ಪಕ್ಷದ ಶಕ್ತಿಯನ್ನು ಹೆಚ್ಚಿಸಬೇಕೆಂದರು.

ಸಣ್ಣಕೈಗಾರಿಕೆ ಅಭಿವೃದ್ಧಿ ಮಂಡಳಿ ಅಧ್ಯಕ್ಷ, ಶಾಸಕ ಟಿ.ರಘುಮೂರ್ತಿ, ಜಿ.ಎಸ್.ಮಂಜುನಾಥ ಪಕ್ಷ ಹಲವಾರು ಜವಾಬ್ದಾರಿ ಹೊತ್ತು ಯಶಸ್ವಿಯಾಗಿ ಕಾರ್ಯನಿರ್ವಹಿಸಿದ್ದಾರೆ. ಆದಿಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಅಧಿಕಾರ ಸ್ವೀಕರಿಸಿರುವುದು ಹೆಮ್ಮೆಯ ವಿಷಯವಾಗಿದೆ. ಜನಾಂಗದ ಅಭಿವೃದ್ಧಿಗೆ ಕೈಗೊಳ್ಳುವ ಎಲ್ಲಾ ಕೆಲಸ ಕಾರ್ಯಗಳಿಗೆ ಸಹಕಾರ ನೀಡುವ ಭರವಸೆ ನೀಡಿದರು. ಮಾಜಿ ಸಂಸದ ಬಿ.ಎನ್.ಚಂದ್ರಪ್ಪ, ಶಾಸಕ ಬಿ.ಟಿ.ಗೋವಿಂದಪ್ಪ ಮಾತನಾಡಿದರು.

ಸನ್ಮಾನವನ್ನು ಸ್ವೀಕರಿಸಿ ಮಾತನಾಡಿದ ನಿಗಮದ ನೂತನ ಅಧ್ಯಕ್ಷ ಜಿ.ಎಸ್. ಮಂಜುನಾಥ, ರಾಜ್ಯದಲ್ಲಿ ಆಡಳಿತ ನಡೆಸುತ್ತಿರುವ ಕಾಂಗ್ರೆಸ್ ಪಕ್ಷ ನಾಡಿನ ದಲಿತ ಸಮುದಾಯದ ಅಭಿವೃದ್ಧಿಗೆ ಶ್ರಮಿಸುತ್ತಿದೆ. ಆದರೆ, ಸಮುದಾಯದ ಕೆಲವರು ಮಾತ್ರ ಅಸಮದಾನವನ್ನು ವ್ಯಕ್ತಪಡಿಸುತ್ತಾರೆ. ಕಾಂಗ್ರೆಸ್ ಪಕ್ಷ ಸಂವಿಧಾನ ಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್, ಹಸಿರುಕ್ರಾಂತಿಹಾರಿಕಾರ ಬಾಬು ಜಗಜೀವನರಾಮ್‌ರವರ ಮಾರ್ಗದರ್ಶನದಲ್ಲಿ ಮುನ್ನಡೆಯುತ್ತಿದೆ ಎಂದರು.

ಜಿಲ್ಲಾ ಕೆಪಿಸಿಸಿ ಅಧ್ಯಕ್ಷ ಎಂ.ಕೆ. ತಾಜ್‌ಪೀರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೆ.ವೀರಭದ್ರಪ್ಪ, ಜಿಲ್ಲಾ ಕೆಡಿಪಿ ನಾಮನಿರ್ದೇಶನ ಸದಸ್ಯ ಒ.ರಂಗಸ್ವಾಮಿ ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T